ವಿಜಯಪುರ | ಸಂಪುಟ 04 | ಸಂಚಿಕೆ 034 | ಪುಟ 04 | ₹ 3.00

https://udayarashmінews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily ಜನಪರ-ಜೀವಪರ ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ Editor: Indushekhar Manur

editor.udayarashmi@gmail.com RNI NO: KARKAN/2023/86203 ಬುಧವಾರ, ಮಾರ್ಚ್, 25, 2026

"ಇತ್ತೀಚೆಗೆ ಶಿವಮೊಗ್ಗದ ಮೃಗಾಲಯದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಪಶುವೈದ್ಯೆ ಡಾ.ಸಮೀಕ್ಷಾ ರೆಡ್ಡಿ ಸಾವಿಗೆ ಕಾರಣವಾಗಿರುವ ಅಧಿಕಾರಿಗಳನ್ನು ತಕ್ಷಣ ಅಮಾನತ್ತು ಮಾಡಿ, ಘಟನೆ ಕುರಿತು ನ್ಯಾಯಾಂಗ ತನಿಖೆ ನಡೆಸಬೇಕಲ್ಲದೆ, ಮೃತರ ಕುಟುಂಬಕ್ಕೆ ಒಂದು ಕೋಟಿ ರೂ. ಪರಿಹಾರ ಧನ ಬಿಡುಗಡೆ ಮಾಡಬೇಕು."



■ ಡಾ.ಶಿವಶರಣಪ್ಪ ಜಿ. ಯಲಗೋಡ
ಕರ್ನಾಟಕ ಪಶು ವೈದ್ಯಕೀಯ ಸಂಘದ ರಾಜ್ಯಾಧ್ಯಕ್ಷರು

# ಮೇ ಅಂತ್ಯದವರೆಗೆ ಕೆರೆಗಳಿಗೆ ನೀರು ಬಿಡಲು ಆಗ್ರಹಿಸಿ ಮನವಿ



■ ಉದಯರಶ್ಮಿ ದಿನಪತ್ರಿಕೆ

ಆಲಮಟ್ಟಿ: ನೀರಾವರಿಗಾಗಿ ಕಾಲುವೆಗಳಿಗೆ ಏಪ್ರಿಲ್ ಅಂತ್ಯದವರೆಗೂ ನೀರು ಹರಿಸಬೇಕು ಹಾಗೂ

ವಿಜಯಪುರ ಜಿಲ್ಲೆಯ ಕೆರೆಗಳ ಭರ್ತಿಗಾಗಿ ಮೇ ಅಂತ್ಯದವರೆಗೂ ನೀರು ಹರಿಸಬೇಕು ಎಂದು ಆಗ್ರಹಿಸಿ ಕರ್ನಾಟಕ ರೈತ ಸಂಘ ಮತ್ತು ಹಸಿರು ಸೇನೆಯ ಕಾರ್ಯಕರ್ತರು ಸೋಮವಾರ ಆಗ್ರಹಿಸಿದರು.

ಇಲ್ಲಿನ ಕೆಬಿಜೆಎನ್‌ಎಲ್ ಮುಖ್ಯ ಎಂಜಿನಿಯರ್ ಡಿ.ಬಸವರಾಜ ಅವರಿಗೆ ಮನವಿ ಅರ್ಪಿಸಿ ನೀರು ಬಿಡುವಂತೆ ಮನವಿ ಮಾಡಿದರು.

ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ನಿಂಗರಾಜ ಅಲೂರ ಹಾಗೂ ತಾಲ್ಲೂಕು ಘಟಕದ ಅಧ್ಯಕ್ಷ ಸೀತಪ್ಪ ಗಣಿ ಮಾತನಾಡಿ, ಕುಡಿಯುವ ನೀರಿನ ಉದ್ದೇಶಕ್ಕಾಗಿ ಜಿಲ್ಲೆಯ ಕೆರೆಗಳ ಭರ್ತಿಗಾಗಿ ಮೇ ತಿಂಗಳಾದ್ಯಂತ ಕಾಲುವೆಗಳ ಮೂಲಕ ಕೆರೆಗಳಿಗೆ ನೀರು ಹರಿಸಬೇಕು, ಅದೇ ರೀತಿ ಶೇಂಗಾ, ಉಳ್ಳಾಗಡ್ಡಿ , ಮೆಕ್ಕೆಜೋಳಕ್ಕೆ ನೀರಿನ ಅಗತ್ಯವಿದೆ ಎಂದರು.

ರೈತರ ಸಮಸ್ಯೆಯ ಬೇಡಿಕೆಯ ಮನವಿ ಪತ್ರ ಸ್ವೀಕರಿಸಿ ಮಾತನಾಡಿದ ಮುಖ್ಯ ಎಂಜಿನಿಯರ್ ಡಿ ಬಸವರಾಜ, ಮೇ ತಿಂಗಳಲ್ಲಿ ಕೆರೆಗಳ ಭರ್ತಿಗಾಗಿ ನೀರು ಹರಿಸಲಾಗುತ್ತದೆ ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಶಿವಪ್ಪ ಪಾಟೀಲ, ಹೊನ್ನಪ್ಪ ಕೆಂಗುತ್ತಿ , ಲಕ್ಷ್ಮಣ ಚಲವಾದಿ, ಈರಯ್ಯ ಹಿರೇಮಠ, ಶಿವಾನಂದ ಚಲವಾದಿ ಮತ್ತೀತರರು ಇದ್ದರು.

# ಮಾ.26ಕ್ಕೆ ರಾಜ್ಯ ಬಜೆಟ್ ಅಧಿವೇಶನ ಮುಕ್ತಾಯ!

## ರಾಜ್ಯದಲ್ಲಿ ಉಪ ಚುನಾವಣೆ ಹಿನ್ನೆಲೆ । ಮಾರ್ಚ್ 26 ರಂದು ಕಲಾಪದ ನಂತರ ಸದನ ಅನಿರ್ದಿಷ್ಟಾವಧಿ ಮುಂದೂಡಿಕೆ । ಸ್ಪೀಕರ್ ಯು ಟಿ ಖಾದರ್ ಪ್ರಕಟ

ಬೆಂಗಳೂರು: ಬಾಗಲಕೋಟೆ ಹಾಗೂ ದಾವಣಗೆರೆ ದಕ್ಷಿಣ ಉಪಚುನಾವಣೆ ಹಿನ್ನೆಲೆಯಲ್ಲಿ ಕರ್ನಾಟಕ ವಿಧಾನಸಭೆಯ ಬಜೆಟ್ ಅಧಿವೇಶನವನ್ನು ಒಂದು ದಿನ ಮುಂಚಿತವಾಗಿ ಮಾರ್ಚ್ 26 ರಂದು ಮುಕ್ತಾಯಗೊಳಿಸಲಾಗುತ್ತಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 2026–27ನೇ ಸಾಲಿನ ಬಜೆಟ್ ಮಂಡಿಸುವುದರೊಂದಿಗೆ ಮಾರ್ಚ್ 6 ರಂದು ಆರಂಭವಾದ ರಾಜ್ಯ ವಿಧಾನಮಂಡಲದ ಬಜೆಟ್ ಅಧಿವೇಶನವು ಮಾರ್ಚ್ 27 ರಂದು ಮುಕ್ತಾಯಗೊಳ್ಳಬೇಕಿತ್ತು.

ವಿಧಾನಸಭೆಯ ಕಲಾಪ ಸಲಹಾ ಸಮಿತಿ (ಃಂಅ) ಸಭೆಯ ನಂತರ ಸ್ಪೀಕರ್ ಯು ಟಿ ಖಾದರ್ ಅವರು ಮಂಗಳವಾರ ಸದನದಲ್ಲಿ ಈ ವಿಷಯ ಪ್ರಕಟಿಸಿದರು.

ಕಲಾಪ ಸಮಿತಿ ಸಭೆ ನಿರ್ಧಾರದಂತೆ ಇಂದು (ಮಾರ್ಚ್ 24) ಬಜೆಟ್ ಮತ್ತು ಬೇಡಿಕೆಗಳ ಮೇಲಿನ ಚರ್ಚೆ ಮುಕ್ತಾಯವಾಗಲಿದೆ. ಈ ಚರ್ಚೆಗಳಿಗೆ ಮಾರ್ಚ್ 26 ರಂದು ಸಿಎಂ ಉತ್ತರ ನೀಡಲಿದ್ದು, ನಂತರ ಧನವಿನಿಯೋಗ ವಿಧೇಯಕವನ್ನು ಚರ್ಚೆಗೆ ತೆಗೆದುಕೊಂಡು ಅಂಗೀಕರಿಸಲಾಗುವುದು. ಮಾರ್ಚ್ 26 ರಂದು ಕಲಾಪದ ನಂತರ ಸದನವನ್ನು ಅನಿರ್ದಿಷ್ಟಾವಧಿಗೆ



ಮುಂದೂಡಲಾಗುವುದು ಎಂದು ಸ್ಪೀಕರ್ ತಿಳಿಸಿದರು.

ಅಧಿವೇಶನವನ್ನು ಒಂದು ದಿನ ಮುಂಚಿತವಾಗಿ ಯಾಕೆ ಮುಕ್ತಾಯಗೊಳಿಸಲಾಗುತ್ತಿದೆ ಎಂದು ಸ್ಪೀಕರ್ ಹೇಳದಿದ್ದರೂ ನಾಯಕರು, ಸಚಿವರು ಮತ್ತು ಶಾಸಕರು ಪ್ರಚಾರದಲ್ಲಿ ಪಾಲ್ಗೊಳ್ಳುವುದರಿಂದ ಮುಂಬರುವ ಉಪಚುನಾವಣೆಗಳನ್ನು ಗಮನದಲ್ಲಿಟ್ಟುಕೊಂಡು ಈ ನಿರ್ಧಾರಕ್ಕೆ ಬರಲಾಗಿದೆ ಎಂದು ಅಧಿಕೃತ ಮೂಲಗಳು ತಿಳಿಸಿವೆ.

ಉಪ ಚುನಾವಣೆಯಿಂದಾಗಿ ಅಧಿವೇಶನದ ಅವಧಿ ಮೊಟಕುಗೊಳ್ಳಬಹುದು ಎಂದು ವಿರೋಧ ಪಕ್ಷದ ನಾಯಕ ಆರ್ ಅಶೋಕ ಮತ್ತು ಕಾರ್ಮಿಕ ಸಚಿವ ಸಂತೋಷ್ ಲಾಡ್ ಸೋಮವಾರ ಹೇಳಿದ್ದರು.


### ಏ. ೯ರಂದು ಉಪಚುನಾವಣೆ




ರಾಜ್ಯದ ಎರಡು ವಿಧಾನಸಭಾ ಕ್ಷೇತ್ರಗಳಾದ ಬಾಗಲಕೋಟೆ ಮತ್ತು ದಾವಣಗೆರೆ ದಕ್ಷಿಣಕ್ಕೆ ಏಪ್ರಿಲ್ 9 ರಂದು ಉಪಚುನಾವಣೆ ನಡೆಯಲಿದೆ.

ಹಿರಿಯ ಕಾಂಗ್ರೆಸ್ ಶಾಸಕರಾದ ಎಚ್ ವೈ ಮೇಟಿ ಮತ್ತು ಶಾಮನೂರು ಶಿವಶಂಕರಪ್ಪ ಅವರ ನಿಧನದಿಂದ ಬಾಗಲಕೋಟೆ ಮತ್ತು ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರಗಳಿಗೆ ಉಪಚುನಾವಣೆ ಅನಿವಾರ್ಯವಾಗಿದೆ.

# ಹಿಪ್ಪರಗಿ ಜಲಾಶಯದಲ್ಲಿ ಇಳಿಮುಖವಾಗುತ್ತಿರುವ ಜೀವಜಲ




■ ಉದಯರಶ್ಮಿ ದಿನಪತ್ರಿಕೆ

■ ವರದಿ: ಸಿದ್ರಾಮ್ ಎಮ್ ಇಟ್ಟಿ

ಜಮಖಂಡಿ: ಬೆಳಗಾವಿ, ವಿಜಯಪುರ ಹಾಗೂ ಬಾಗಲಕೋಟೆ ಜಿಲ್ಲೆಗಳ ರೈತರು, ಸಾರ್ವಜನಿಕರ ಪಾಲಿಗೆ ಜೀವಜಲ ಆಗಿರುವ ಹಿಪ್ಪರಗಿ ಜಲಾಶಯದಲ್ಲಿನ ನೀರು ಬಿರುಬೇಸಿಗೆಯಿಂದ ದಿನದಿಂದ ದಿನಕ್ಕೆ ಇಳಿಮುಖವಾಗುತ್ತಿದೆ.

ಸದ್ಯ 2.80 ಟಿಎಂಸಿಯಷ್ಟು ನೀರು ಮಾತ್ರ ಸಂಗ್ರಹವಿದ್ದು, ಮಹಾರಾಷ್ಟ್ರದ ಕೋಯ್ನಾ ಜಲಾಶಯದಿಂದ ನೀರು ಬಿಡದಿದ್ದರೆ ಬರುವ ದಿನಗಳಲ್ಲಿ ನೀರಿಗಾಗಿ ಹಾಹಾಕಾರ ಉಂಟಾಗುವ ಭೀತಿ ಎದುರಾಗಿದೆ. ಹಿಪ್ಪರಗಿ ಜಲಾಶಯದಿಂದ ಪ್ರತಿದಿನ 0.07 ಟಿಎಂಸಿಯಷ್ಟು ನೀರು ಖಾಲಿಯಾಗುತ್ತಿದೆ. ಜನತೆಯ ಬಳಕೆ ಒಂದು ಕಾರಣವಾದರೆ, ಬಿರುಬಿಸಿಲಿನ ತಾಪಕ್ಕೆ ನೀರು ಆವಿಗೊಂಡು ಜಲಾಶಯದಲ್ಲಿನ ನೀರು ಕಡಿಮೆಯಾಗುತ್ತಿದೆ.

ನೀರಿನ ಮಟ್ಟ ಕೆಲ ದಿನಗಳಲ್ಲಿ ದಿಢೀರ್ ಕುಸಿತ ಕಂಡ ಹಿನ್ನೆಲೆಯಲ್ಲಿ ಜನರಿಗೆ ಬೇಸಿಗೆಯ ಆತಂಕ ಶುರುವಾಗಿದೆ. ಇದೇ ರೀತಿ ಪ್ರತಿ ದಿನ ಖಾಲಿಯಾದರೆ ಮೇ ಎರಡನೇ ವಾರದಲ್ಲಿ ನೀರು ಸಂಪೂರ್ಣ ಖಾಲಿ ಯಾಗಬಹುದೆಂದು ಅಂದಾಜಿಸಲಾಗಿದೆ.

> ಹಿಪ್ಪರಗಿ ಜಲಾಶಯದಲ್ಲಿ ಗೇಟ್ ಅವಘಡದಿಂದ ನೀರಿನ ಪ್ರಮಾಣ ಕಡಿಮೆಯಿದೆ. ಜಲಾಶಯದ ನೀರಿನ ಮಟ್ಟ ದಿನದಿಂದ ದಿನಕ್ಕೆ ಕಡಿಮೆಯಾಗುತ್ತಿದೆ. ಸಾರ್ವಜನಿಕರು ಅನಗತ್ಯವಾಗಿ ನೀರು ಪೋಲು ಮಾಡದೇ ಕಾಳಜಿಯಿಂದ ಬಳಕೆ ಮಾಡಬೇಕು.
> ■ ಅನೀಲ ಬಡಿಗೇರ.
> ತಹಶೀಲ್ದಾರರು ಜಮಖಂಡಿ.

> "ಜಿಲ್ಲಾಡಳಿತ ಮತ್ತು ತಾಲೂಕು ಆಡಳಿತ ಎಚ್ಚೆತ್ತು ಮುಂಬರುವ ದಿನಗಳಲ್ಲಿ ಪ್ಷಾಂತಿರದಲ್ಲಿ ನೀರಿನ ಕೊರತೆ ಆಗದಂತೆ ಈಗಲೇ ಮುನ್ನೆಚ್ಚರಿಕೆ ವಹಿಸಿ ಸೂಕ್ತಕ್ರಮಗಳನ್ನು ಕೈಗೊಳ್ಳಬೇಕು."
> ■ ಕಾಶೀನಾಥ ಚನವೀರ
> ಬಿಜೆಪಿ ಯುವ ಮುಖಂಡ, ಜಮಖಂಡಿ

ಕುಡಿಯುವ ನೀರು ಬಿಡುಗಡೆಯಾದರೆ ಕೊಂಚ ನಿರಾಳ: ಪ್ರತಿವರ್ಷ ಬೇಸಿಗೆ ಸಂದರ್ಭ ಹಿಪ್ಪರಗಿ ಜಲಾಶಯದಿಂದ ಮುಂಭಾಗಕ್ಕೆ ಅಂದಾಜು ಸುಮಾರು 0.5 ಟಿಎಂಸಿಯಷ್ಟು ನೀರನ್ನು ಜಮಖಂಡಿ ಭಾಗಕ್ಕೆ ನೀರಿನ ಸಲುವಾಗಿ ಬಿಡುಗಡೆಗೊಳಿಸುತ್ತಿದ್ದರು. ಪ್ರಸಕ್ತ ವರ್ಷ ಗೇಟ್ ನಂ.22ರಲ್ಲಿ ಆಗಿರುವ ಅವಘಡದಿಂದ 2 ಟಿಎಂಸಿಗೂ ಹೆಚ್ಚು ನೀರು ಪೋಲಾಗಿದ್ದು, ಇದರ ಪರಿಣಾಮವಾಗಿ ಹಿಪ್ಪರಗಿ ಬ್ಯಾರೇಜ್ ಹಿನ್ನೀರಿನಲ್ಲಿರುವ ನಗರ, ಗ್ರಾಮ ಹಾಗೂ ರೈತ– ಜಾನುವಾರುಗಳಿಗೆ ಕುಡಿಯುವ ನೀರಿನ ಅಭಾವ ಉಂಟಾಗುವ ಸಾಧ್ಯತೆಗಳಿವೆ. ಬೇಸಿಗೆ ಮುಗಿಯುವವರೆಗೂ ಇದೇ ನೀರು ನಿಯಂತ್ರಣದಲ್ಲಿದ್ದರೆ ಮಾತ್ರ ಮೇ ಮಧ್ಯಂತರವರೆಗೆ ಪರಿಸ್ಥಿತಿ ನಿಭಾಯಿಸಬಹುದು.

ಹಿಪ್ಪರಗಿ ಜಲಾಶಯದ ಗೇಟು ಕಿತ್ತುಹೋದಾಗ ಭಾರೀ ಪ್ರಮಾಣದಲ್ಲಿ ಹೈಡ್ರಾಮಾ ನಡೆಸಿದ್ದ ಜನಪ್ರತಿನಿಧಿಗಳು, ವಿಪಕ್ಷ ಧುರೀಣರು ಇದೀಗ ಕೃಷ್ಣೆಯ ಒಡಲು ಸಂಪೂರ್ಣ ಖಾಲಿಯಾಗುತ್ತಿದ್ದರೂ ತುಟಿ ಪಿಟಕ್ ಎನ್ನುತ್ತಿಲ್ಲ. ಸರ್ಕಾರದ ಮೇಲೆ ಒತ್ತಡ ಹಾಕಿ ಕೃಷ್ಣೆಗೆ ನೀರು ಬಿಡಿಸಲು ಕಾಳಜಿ ತೋರಿಸುತ್ತಿಲ್ಲವೇಕೆ ಎಂಬುದು ಸಾರ್ವಜನಿಕರ ಪ್ರಶ್ನೆಯಾಗಿದೆ. ಜನರ ಆಶೋತ್ತರಕ್ಕೆ ಯಾರು ಸ್ಪಂದಿಸುವರೋ ಕಾದು ನೋಡಬೇಕಿದೆ.

# ಕುಡಿವ ನೀರಿನ ಸಮಸ್ಯೆಯಾಗದಂತೆ ನಿಗಾವಹಿಸಿ :ಎಸಿ ಗುರುಸ್ವಾಮಿ

■ ಉದಯರಶ್ಮಿ ದಿನಪತ್ರಿಕೆ

ಇಂಡಿ: ಎಸ್ಸೆಸ್ಸೆಲ್ಸಿ ಪರೀಕ್ಷೆ ಪ್ರಾರಂಭವಾಗಿದ್ದು ಯಾವದೇ ಶಾಲೆ ಹಾಗೂ ಹಾಸ್ಟೇಲಗಳಲ್ಲಿ ನೀರಿನ ಸಮಸ್ಯೆ ಆಗದಂತೆ ಕ್ರಮ ಕೈಕೊಳ್ಳಬೇಕು ಎಂದು ಕಂದಾಯ ಉಪವಿಬಾಗಾಧಿಕಾರಿ ಚಿದಾನಂದ ಗುರುಸ್ವಾಮಿ ತಿಳಿಸಿದರು.

ತಾ,ಪಂ ಸಬಾಭವನದಲ್ಲಿ ಕುಡಿಯುವ ನೀರಿನ ಸಮಸ್ಯೆಗಳ ಗಳ ಬಗ್ಗೆ ನಡೆದ ಟಾಸ್ಕ ಪೋರ್ಸ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಬೇಸಿಗೆಯಲ್ಲಿ ನೀರಿನ ಅಭಾವ ಆಗದಂತೆ ಸಮರ್ಪಕವಾಗಿ ಕುಡಿಯುವ ನೀರು ಪೂರೈಸಬೇಕು. ನೀರಿನ ಸಮಸ್ಯೆ ಉದ್ಭವಿಸಬಹುದಾದ ಸ್ಥಳಗಳ ಕುರಿತು ಮುಂಚಿತವಾಗಿ ಮಾಹಿತಿ ಸಲ್ಲಿಸಬೇಕು ಎಂದರು.

ನಗರ ನೀರು ಸರಬರಾಜಿಗೆ ಸಂಬಂದಿಸಿದಂತೆ ಅಗತ್ಯ ಮುಂಜಾಗ್ರತೆ ಕ್ರಮ ವಹಿಸಬೇಕು. ಗ್ರಾಪಂ ಹಂತದಲ್ಲಿಯೂ ನೀರಿನ ಸಮಸ್ಯೆ ಆಗದಂತೆ ನೋಡಿಕೊಳ್ಳಬೇಕು. ಎಂದು ಎಇಇ ಬಂಡಿಯವರಿಗೆ ಸೂಚನೆ ನೀಡಿದರು.

ಇಒ ಭೀಮಾಶಂಕರ ಕನ್ನೂರ ಮಾತನಾಡಿ,




ಮಿರಗಿ, ಮಸಳಿ, ಗುಬ್ಬೇವಾಡ ಕೊಳುರಗಿ ಝಳಕಿ ಬಸನಾಳ ಬಬಲಾದ ನಿಂಬಾಳ ಕೆಡಿ ಸಾಲೋಟಗಿ ಹಾಗೂ ತಡವಲಗಾ ಅಡವಿ ವಸ್ತಿಗಳ ಕುರಿತು ಗ್ರಾ.ಪಂ ಗಳಲ್ಲಿ ಚರ್ಚಿಸಬೇಕು. ಯಾವದೇ ಸಮಸ್ಯೆ ಬರದಂತೆ ಖುದ್ದಾಗಿ ಪರಿಶೀಲನೆ ನಡೆಸಬೇಕು ಎಂದು ಸೂಚಿಸಿದರು. ಸಹಾಯಕ ನಿರ್ದೇಶಕ ಪ್ರಕಾಶ ರಾಠೋಡ, ಯೋಜನಾಧಿಕಾರಿ ನಂದೀಪ ರಾಠೋಡ, ಹೆಸ್ಕಾಂ ಎಇಇ ಎಸ್.ಆರ್.ಮೆಡೆಗಾರ, ಪೌರಾಯುಕ್ತ ನಗರ ಸಭೆ ಶಿವಾನಂದ ಪೂಜಾರಿ ಕಾರ್ಯಪಾಲಕ ಅಭಿಯಂತರ ಮನೋಜಕುಮಾರ ತಾಲೂಕಿನ ಎಲ್ಲ ಗ್ರಾ.ಪಂ ಆಡಳಿತ ಅಧಿಕಾರಿಗಳು ಮತ್ತು ಪಿಡಿಒಗಳು ಮತ್ತಿತರಿದ್ದರು.

# ಕೆಬಿಜೆಎನ್ನೆಲ್ ಅಧಿಕಾರಿಗಳಿಂದ ಚಡಚಣ ಭಾಗದ ರೈತರಿಗೆ ಮಲತಾಯಿ ಧೋರಣೆ

## ಝಳಕಿಯಲ್ಲಿ ರೈತರ ಆಕ್ರೋಶ । ಕೆಬಿಜೆಎನ್‌ಎಲ್ ವಿರುದ್ಧ ರೈತರ ಪ್ರತಿಭಟನೆ । ಕೆಲಕಾಲ ಉದ್ವಿಗ್ನ ಪರಿಸ್ಥಿತಿ ನಿರ್ಮಾಣ

■ ಉದಯರಶ್ಮಿ ದಿನಪತ್ರಿಕೆ

ಚಡಚಣ: ತಾಲೂಕಿನ ರೈತರಿಗೆ ಕೆ. ಬಿ. ಜೆ. ಎನ್. ಎಲ್ ಅಧಿಕಾರಿಗಳು ಮಲತಾಯಿ ದೋರಣೆ ಮಾಡುತ್ತಿದ್ದಾರೆ, ನಮ್ಮ ರೈತರು, ಜಾನುವಾರುಗಳಿಗೆ, ಜಮೀನುಗಳಿಗೆ ನೀರಿಲ್ಲದೆ ಗೊಳಾಡಿದರೂ ರೈತರ ಕೂಗಿಗೆ ಸ್ಪಂದನೆ ಕೊಡುತ್ತಿಲ್ಲ ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಸಂಘದ ವಿಜಯಪುರ ಜಿಲ್ಲಾಧ್ಯಕ್ಷ ಸಂಗಮೇಶ ಸಗರ ಆಕ್ರೋಶ ವ್ಯಕ್ತಪಡಿಸಿದರು.

ಝಳಕಿ ಹಾಗೂ ಚಡಚಣ ತಾಲೂಕಿನ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಕಳೆದ ಕೆಲವು ತಿಂಗಳಿಂದ ನೀರಿನ ಕೊರತೆ ತೀವ್ರವಾಗಿದೆ. ಕೆಬಿಜೆಎನ್‌ಎಲ್ ಯೋಜನೆಗಳು ಸಮಯಕ್ಕೆ ಪೂರ್ಣಗೊಳ್ಳದ ಕಾರಣ ಕಾಲುವೆಗಳಿಗೆ ನೀರು ಸರಿಯಾಗಿ ಹರಿಯುತ್ತಿಲ್ಲ. ಇದರಿಂದ ರೈತರು ಬೆಳೆದ ಬೆಳೆಗಳು ಹಾನಿಗೊಳಗಾಗುತ್ತಿವೆ. ರೈತರ ಬೇಡಿಕೆಗಳಾದ ತಕ್ಷಣ ಕಾಲುವೆಗಳಿಗೆ ನೀರು ಬಿಡುಗಡೆ ಮಾಡಬೇಕು,ಬಾಕಿ ಉಳಿದ ನೀರಾವರಿ ಯೋಜನೆಗಳನ್ನು ಶೀಘ್ರ ಪೂರ್ಣಗೊಳಿಸಬೇಕು, ಬೆಳೆ ನಷ್ಟಕ್ಕೆ ಸರ್ಕಾರದಿಂದ ಪರಿಹಾರ ನೀಡಬೇಕು ಎಂದು ಒತ್ತಾಯಿಸಿದರು.

ರೈತರಿಗೆ ಸರಿಯಾದ ನೀರು ಪೋರೈಕೆ ಮಾಡಬೇಕು, ಇಲ್ಲವಾದಲ್ಲಿ ಮುಂದಿನದಿನಗಳಲ್ಲಿ ಜಾನುವಾರುಗಳನ್ನು ತಂದು ಉಗ್ರ ಹೋರಾಟ ಮಾಡಲಾಗುವುದು ಎಂದರು.

ನಾಗಠಾಣ ಕ್ಷೇತ್ರದ 35 ರಿಂದ 46ರ ಡಿಸ್ಟ್ರಿಬ್ಯೂಟ–ರ್ ಕಾಲುವೆಗೆ ನೀರು ಹರಿಸುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಸಂಘದ ಸದಸ್ಯರು ಮತ್ತು ಚಡಚಣ ತಾಲೂಕಾ ರೈತರಿಂದ ಝಳಕಿ ಕಾರ್ಯಪಾಲಕ ಅಭಿಯಂತರರು ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ ಕಚೇರಿ ಎದುರಿಗೆ ರೈತರಿಂದ ಬೃಹತ್ ಹೋರಾಟ ನಡೆಯಿತು.

ಅಧಿಕ್ಷಕ ಅಭಿಯಂತರ ಮನೋಜಕುಮಾರ ಗಡಬಳೆ ಮಾತನಾಡಿ, ಕುಡಿಯುವ ನೀರಿನ ಅಭಾವವಿದ್ದು, ಶುದ್ಧ ಘಟಕ ಮತ್ತು ಕೆರೆಗಳಿಗೆ ನೀರನ್ನು ತುಂಬಿಸಿ ನಂತರ ಕಾಲುವೆಗಳಿಗೆ ನೀರು ಹಾರೈಸುವಂತೆ ಆದೇಶವಿದ್ದು, ನಾವು ಅದನ್ನು ಪಾಲಿಸಬೇಕಾಗುತ್ತದೆ, ನಾನು ಯಾವ ರೈತರಿಗೂ ಅಸಹ್ಯ ಮಾತನಾಡಿಲ್ಲ, ಆದರೂಕೂಡ ನಾನು ರೈತರಲ್ಲಿ ಕ್ಷಮಾಪಣೆ ಕೇಳುತ್ತೇನೆ ಎಂದರು.



ದಯಾನಂದ ಕೋಳಿ ಮಾತನಾಡಿ ಸರ್ಕಾರ ನೀಡಿರುವ ಆದೇಶ ಪ್ರತಿ ನಮಗೆ ಕೊಡಿ, ರೈತರೆಂದರೆ ಮರ್ಯಾದೆ ಕೊಡದ ಅಧಿಕಾರಿಗಳಿಗೆ ಧಿಕ್ಕಾರ, ರೈತರು ದೇಶದ ಬೆನ್ನೆಲಬು ಎಂದು ಭಾಷಣ ಬಿಗಿಯುತ್ತೀರಿ, ರೈತರು ಕಚೇರಿಗೆ ಬಂದರೆ ಅಸಭ್ಯ ವರ್ತನೆ ಮಾಡುತ್ತೀರಿ, ನಮಗೆ ನ್ಯಾಯ ಸಿಗುವವರೆಗೂ ಇಲ್ಲಿಂದ ಕದಡೊದಿಲ್ಲ ಎಂದು ಘೋಷಣೆ ಕೂಗಿದರು.

ಕಚೇರಿ ಎದುರಲ್ಲಿ ರೈತರೇ ಸ್ವತಃ ಅಡುಗೆ ಮಾಡಿ, ಕಚೇರಿ ಎದುರು ನೆಲದ ಮೇಲೆ ಕುಳಿತು ಉಪಹಾರ ಮಾಡಿ, ಮತ್ತೆ ಹೋರಾಟ ಮುಂದುವರೆಸಿದರು.

ಇಂಡಿ ತಹಸೀಲ್ದಾರ ವಿಜಯ ಕಡಕಭಾವಿ ಮತ್ತು ಚಡಚಣ ತಹಸೀಲ್ದಾರ ಸಂಜಯ ಇಂಗಳೆ, ಝಳಕಿ ಠಾಣಾ ಅಧಿಕಾರಿಗಳು ಮಂಜುನಾಥ್ ತೀರಕನ್ನವರ ಮಧ್ಯಸ್ತಿಕೆ ವಹಿಸಿ, ರೈತರಿಗೆ ಅಶ್ವಾಸನೆ ನೀಡಿ, ಜಿಲ್ಲಾಧಿಕಾರಿಗಳೊಂದಿಗೆ ನೇರವಾಗಿ ಫೋನ್ ಮುಖಾಂತರ ಸಂದರ್ಶನ ನಡೆಸಿ ನೀರು ಪೂರೈಕೆ ಮಾಡಲಾಗುವದು ಎಂದು ತಿಳಿಸಿದರು. ಆಗ ರೈತರು ಹೋರಾಟ ಅಂತ್ಯಗೊಳಿಸಿ ಅಧಿಕಾರಿಗಳೊಂದಿಗೆ ಸ್ಪಂದಿಸಿದರು.

ಪ್ರತಿಭಟನೆ ವೇಳೆ ಕೆಲಕಾಲ ಉದ್ವಿಗ್ನ ಪರಿಸ್ಥಿತಿ ನಿರ್ಮಾಣವಾಯಿತು. ಸ್ಥಳಕ್ಕೆ ಬಂದ ಪೊಲೀಸರು ಪರಿಸ್ಥಿತಿಯನ್ನು ನಿಯಂತ್ರಿಸಿದರು.

ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆಯ ಎಲ್ಲ ಕಾರ್ಯಕರ್ತರು, ದಯಾನಂದ ಕೋಳಿ, ವಸಂತ ಭೈರಾಮಡಿ, ಗುರುನಾಥ ಬಗಲಿ, ಎಮ್.ಎಚ್. ಪೂಜಾರಿ, ಖಾಜೀಸಾಬ ಗುರುನಾಳ, ರಾಜುಗೌಡ ಪಾಟೀಲ, ದಸ್ತಗೀರ ವಾಲಿಕಾರ, ಅಣ್ಣಾರಾಯ ಶಿರನಾಳ, ಸತೀಶ ತಳಕೇರಿ, ದಾನೇಶ ತಳಕೇರಿ,ನಾಗನಾಥ ಬಿರಾದಾರ, ಅಶೋಕ್ ಜಿತ್ತಿ, ಸೋಮನಾಥ ಮದಭಾವಿ, ಭೀಮಾಶಂಕರ್ ರಗಟೆ, ಕಾಶಿರಾಯ ಕಾಮಗೊಂಡ, ಸದಾಶಿವ ತೇಲಿ, ಸುರೇಶ ಮಾಳಾಬಾಗಿ, ಲಕ್ಷ್ಮಣ ಬೆಳ್ಳಿ, ಸಂತೋಷ ಘೋಡಕೆ, ಖಾಜಾಮಿಯಾ ಪಿರಜಾದೆ, ಮಹೇಶ ವಗ್ಗಿ, ಲೋಣಿ (ಬಿಕೆ), ಚಡಚಣ,ಬರಡೋಲ, ಏಳಗಿ, ಹಲಸಂಗಿ, ಹತ್ತಳ್ಳಿ, ಹಾವಿನಾಳ, ಮಣಂಕಲಗಿ, ಮರಗುರ, ತದ್ದೇವಾಡಿ, ಗೋಡಿಹಾಳ, ಉಮರಾಣಿ ಗ್ರಾಮದ ರೈತರು ಉಪಸ್ಥಿತ–ರಿದ್ದರು.

# ಅಲೆಮಾರಿ ಜನಾಂಗದವರ ಕಾಲೊನಿಗಳಿಗೆ ಮೂಲಸೌಲಭ್ಯ ಕಲ್ಪಿಸಿ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಅಲೆಮಾರಿ ಹಾಗೂ ಅರೆ ಅಲೆಮಾರಿ ಜನಾಂಗದವರು ವಾಸಿಸುವ ಕಾಲೋನಿಗಳಿಗೆ ಮೂಲಭೂತ ಸೌಲಭ್ಯ ಒದಗಿಸಿ,ಸರ್ಕಾರದ ಯೋಜನೆ ಅನುಷ್ಠಾನಗೊಳಿಸಿ ಅವರಿಗೆ ಸರ್ಕಾರ ನೀಡುವ ಸೌಲಭ್ಯ ಒದಗಿಸಿ ಎಂದು ಜಿಲ್ಲಾಧಿಕಾರಿ ಆನಂದ ಕೆ. ಅವರು ಅಧಿಕಾ–ರಿಗಳಿಗೆ ಸೂಚಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ನಡೆದ ಕರ್ನಾಟಕ ಪರಿಶಿಷ್ಟ ಜಾತಿ– ಪರಿಶಿಷ್ಟ ಪಂಗಡದ ಅಲೆಮಾರಿ ಸಮುದಾಯಗಳ ಒಂದನೇ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸಮುದಾಯ ಕೇಂದ್ರ, ಭೂ ಒಡೆತನ, ಅಂಗನವಾಡಿ ಕೇಂದ್ರ, ಗಂಗಾ ಕಲ್ಯಾಣ ಯೋಜನೆಯಡಿ ಆಯ್ಕೆಯಾದ ಫಲಾನುಭವಿಗಳಿಗೆ ಬೊರ್ ವೆಲ್ ಕೊರೆಯಿಸುವ ಬಗ್ಗೆ ಸದಸ್ಯರು ವಿಷಯ ಪ್ರಸ್ತಾಪಿಸಿದರು ಕುಡಿಯುವ ನೀರು, ವಿದ್ಯುತ್ ಸಮಸ್ಯೆ, ಮೂಲಭೂತ ಸೌಲಭ್ಯ ಒದಗಿಸಿ, ಈ ಸಮುದಾಯದ ಕಾಲೋನಿಗಳ ಮಕ್ಕಳಿಗಾಗಿ ಅಂಗನವಾಡಿ ಕೇಂದ್ರ,ಸೌಲಭ್ಯ ಒದಗಿಸಿದ್ದು, ಸಮರ್ಪವಾಗಿ




ನಡೆಯುವಂತೆ ನೋಡಿಕೊಳ್ಳಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಈ ಜನಾಂಗದವರ ಅಭಿವೃದ್ಧಿಗಾಗಿ ಸರ್ಕಾರ ಹಲವಾರು ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿದ್ದು, ಅವ–ರಿಗೆ ದೊರಕಿಸಬೇಕಾದ ಸೌಲಭ್ಯಗಳನ್ನು ತಲುಪಿಸಿ, ಜನಾಂಗದ ಆರ್ಥಿಕ ಅಭಿವೃದ್ಧಿಗಾಗಿ ಮೂಲಭೂತ ಸೌಲಭ್ಯ ಕಲ್ಪಿಸುವುದು ಸೇರಿದಂತೆ ಹಲವಾರು ಯೋಜನೆಗಳನ್ನು ಅರ್ಹರಿಗೆ ತಲುಪಿಸಿ ಜನಾಂಗದವರ ಆರ್ಥಿಕ ಸ್ವಾವಲಂಬನೆ ಹೊಂದಲು ಈ ಸಮುದಾಯಗಳಿಗೆ ಸರ್ಕಾರ ನೀಡುವ ಆರ್ಥಿಕ ಬೆಂಬಲದ ಯೋಜನೆಗಳ ಬಗ್ಗೆ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಅರಿವು ಜಾಗೃತಿ ಮೂಡಿಸಿ ನಿಗಮದಿಂದ ಅನುಷ್ಠಾನಗೊಳ್ಳುವ ಸರ್ಕಾರದ ವಿವಿಧ ಸೌಲಭ್ಯ– ಸವಲತ್ತುಗಳನ್ನು ಅರ್ಹರು ಪಡೆದುಕೊಳ್ಳಲು ತಿಳಿವಳಿಕೆ ನೀಡುವಂತೆ ಸೂಚಿಸಿದರು.

2022 ರಿಂದ 2025–26ನೇ ಸಾಲಿನ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದ ವಿವಿಧ ಯೋಜನೆಯಡಿ ನಿಗದಿಪಡಿಸಿರುವ ಭೌತಿಕ ಮತ್ತು ಆರ್ಥಿಕ ಗುರಿಗಳ ಮಾಹಿತಿ ವಿವರ ಸಭೆಗೆ ಮಂಡಿಸಲಾಯಿತು.

ಸಭೆಯಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾ–ರಿಗಳಾದ ರಿಷಿ ಆನಂದ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಲಕ್ಷ್ಮಣ ನಿಂಬರಗಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬದ್ರುದ್ದೀನ್ ಸೌದಾಗರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಸಂಪತ್ತುಕುಮಾರ ಗುಣಾರಿ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾರ ಮಹೇಶ ಪೋತದಾರ, ಹೆಸ್ಕಾಂ ಅಧಿಕ್ಷಕ ಅಭಿಯಂತರರಾದ ಸಿದ್ದಪ್ಪ ಬಿಂಜಗೇರಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಲೆಮಾರಿ ಮತ್ತು ಬುಡಕಟ್ಟು ಸಮುದಾಯದ ಯೋಜನೆಗಳ ಅನುಷ್ಠಾನ ಸಮಿತಿ ಸದಸ್ಯರಾದ ಸುನೀಲ ನಾರಾಯಣ ಭಜಂತ್ರಿ, ಸಂಜೀವಕುಮಾರ ದಶವಂತ, ಧರ್ಮಣ್ಣ ವಿಭೂತಿ, ರಾಹುಲ ಶಿಳ್ಳಿಕ್ಯಾತರ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.



## ಎಸ್ಸೆಸ್ಸೆಲ್ಸಿ ಪರೀಕ್ಷಾ ಕೇಂದ್ರಕ್ಕೆ ಜಿಪಂ ಸಿಇಒ ರಿಷಿ ಆನಂದ ಭೇಟಿ

■ ಉದಯರಶ್ಮಿ ದಿನಪತ್ರಿಕೆ


ವಿಜಯಪುರ: ಎಸ್.ಎಸ್.ಎಲ್.ಸಿ ಪರೀಕ್ಷೆ ಯಶಸ್ವಿ ಹಾಗೂ ಪಾರದರ್ಶಕವಾಗಿ ನಡೆಯುವ ನಿಟ್ಟಿನಲ್ಲಿ ವಿಜಯಪುರ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಿಷಿ ಆನಂದ ಅವರು ಸೋಮವಾರ ನಗರದ ವಿವಿಧ ಪರೀಕ್ಷಾ ಕೇಂದ್ರಗಳಿಗೆ ಹಾಗೂ ಪರೀಕ್ಷಾ ವೆಬ್ ಕಾಸ್ಟಿಂಗ್ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಮಿನಿ ಸಭಾಂಗಣದಲ್ಲಿ ಸ್ಥಾಪಿಸಲಾದ ಜಿಲ್ಲಾ ವೆಬ್ ಕಾಸ್ಟಿಂಗ್ ಕೇಂದ್ರಕ್ಕೆ ಭೇಟಿ ನೀಡಿ, ಜಿಲ್ಲೆಯಾದ್ಯಂತ ನಡೆಯುತ್ತಿರುವ ಪರೀಕ್ಷೆಗಳ ನೇರ ವೀಕ್ಷಣಾ ವ್ಯವಸ್ಥೆಯನ್ನು ಪರಿಶೀಲಿಸಿದರು. ತಾಂತ್ರಿಕ ವ್ಯವಸ್ಥೆಗಳು ದೋಷ ರಹಿತವಾಗಿ ಕಾರ್ಯ ನಿರ್ವಹಿಸುವಂತೆ ನಿರಂತರ ನಿಗಾವಹಿಸಬೇಕು ಎಂದು ಸೂಚಿಸಿದರು. ಈ ಸಂದರ್ಭದಲ್ಲಿ ಎಸ್‌ಎಸ್‌ಎಲ್‌ಸಿ ಜಿಲ್ಲಾ ನೋಡೆಲ್ ಅಧಿಕಾರಿಗಳಾದ ಟಿ.ಎಸ್. ಕೊಲ್ಹಾರ, ಜಿಲ್ಲೆಯ ಎಲ್ಲಾ ವಲಯಗಳ ಮುಖ್ಯಸ್ಥರು ಹಾಗೂ ಪರೀಕ್ಷಾ ವೆಬ್ ಕಾಸ್ಟಿಂಗ್ ವೀಕ್ಷಕರು, ಪರೀಕ್ಷಾ ಕೇಂದ್ರಗಳ ಮೇಲ್ವಿಚಾರಕರು, ಪೋಲಿಸ್ ಸಿಬ್ಬಂದಿ, ಆರೋಗ್ಯ ಕಾರ್ಯಕರ್ತರು ಹಾಗೂ ಇತರೆ ಸಿಬ್ಬಂದಿಯವರು ಉಪಸ್ಥಿತರಿದ್ದರು.



## ಕ್ಷಣ ನಿಧಿ ಸಲಹಾ ಸಮಿತಿಯ ಸದಸ್ಯರಾಗಿ ಗುಂದಗಿ ಆಯ್ಕೆ

■ ಉದಯರಶ್ಮಿ ದಿನಪತ್ರಿಕೆ

ಆಲಮೇಲ: ಕರ್ನಾಟಕ ರಾಜ್ಯ ಸಹಕಾರ ಪಟ್ಟಣ ಬ್ಯಾಂಕುಗಳ ಮಹಾಮಂಡಳದ ಶಿಕ್ಷಣ ನಿಧಿ ಸಲಹಾ ಸಮಿತಿಯ ಸದಸ್ಯರಾಗಿ ಅಲಮೇಲದ ಶಿವಕುಮಾರ ಗುಂದಗಿ ನೇಮಗೊಂಡಿದ್ದಾರೆ. ಇತ್ತೀಚಿಗೆ ಕರ್ನಾಟಕ ರಾಜ್ಯ ಸಹಕಾರ ಪಟ್ಟಣ ಬ್ಯಾಂಕುಗಳ ಮಹಾಮಂಡಳದ ಪ್ರಥಮ ನಿರ್ದೇಶಕ ಮಂಡಳಿ ಸಭೆಯಲ್ಲಿ ನಿರ್ದೇಶಕ ಮಂಡಳಿಯು ಶಿಕ್ಷಣ ನಿಧಿ ಸಲಹಾ ಸಮಿತಿಗೆ ಸದಸ್ಯರುಗಳನ್ನು ನೇಮಕ ಮಾಡುವ ಕುರಿತು ಸಭೆಯಲ್ಲಿ ಸುದೀರ್ಘವಾಗಿ ಚರ್ಚಿಸಿ. ಮಹಾಮಂಡಳದ ಶಿಕ್ಷಣ ನಿಧಿ ಸಲಹಾ ಸಮಿತಿಯ ಸದಸ್ಯರನ್ನಾಗಿ ವಿಜಯಪುರ ಜಿಲ್ಲೆಯ ಅಲಮೇಲ ಪಟ್ಟಣದ ಅಲಮೇಲ ಅರ್ಬನ್ ಕೋ ಆಪರೇಟಿವ್ ಬ್ಯಾಂಕಿನ ಅಧ್ಯಕ್ಷ ಶಿವಕುಮಾರ ಗುರುಬಸಪ್ಪ ಗುಂದಗಿ ಅವರನ್ನು ನೇಮಕ ಮಾಡಲಾಯಿತು. ಸೋಮವಾರ ಅಲಮೇಲ ಅರ್ಬನ್ ಕೋ ಆಪರೇಟಿವ್ ಬ್ಯಾಂಕಿನ ಆಡಳಿತ ಮಂಡಳಿ ನಿರ್ದೇಶಕರು ಹಾಗೂ ಸಿಬ್ಬಂದಿ ಶಿವಕುಮಾರ್ ಗುಂದಗಿ ಅವರಿಗೆ ಸನ್ಮಾನಿಸಿ ಅಭಿನಂದಿಸಿದರು.



## ದೇವರ ದಾಸಿಮಯ್ಯ ನವರ ಜಯಂತಿ ಆಚರಣೆ

■ ಉದಯರಶ್ಮಿ ದಿನಪತ್ರಿಕೆ

ಕೊಲ್ಹಾರ: ಪಟ್ಟಣದ ತಹಶೀಲ್ದಾರ ಕಾರ್ಯಾಲಯದಲ್ಲಿ ಶ್ರೀ ದೇವರ ದಾಸಿಮಯ್ಯ ನವರ ಜಯಂತಿಯನ್ನು ಸಮಾಜದ ಮುಂಖಡರೊಂದಿಗೆ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಶಿರಸ್ತೇದಾರ್ ಕೃಷ್ಣಾ ಎಂ ಗುಡೂರ, ಸಂಗಪ್ಪ ಮ ಚೌಡಪ್ಪನವರ, ಸಂಗಪ್ಪ ಬಳೂರಗಿ, ಬಸವರಾಜ ಚೌಡಪ್ಪನವರ, ರಾಜು ಮೇಲಗಿರಿ ವಿಜಯಕುಮಾರ ನೀಲವಾಣಿ, ಪ್ರಕಾಶ ಕಲ್ಯಾಣಿ, ಶಿವು ಚೌಡಪ್ಪನವರ ಹಾಗೂ ಕಾರ್ಯಾಲಯದ ಸಿಬ್ಬಂದಿಯವರು ಹಾಜರಿದ್ದರು.

**ವಿಜಯಪುರ ಜಿಲ್ಲಾ ಪಂಚಾಯತಿ ಉಪಕಾರ್ಯದರ್ಶಿ ಪ್ರಕಾಶ ವಡ್ಡರ ಅಧಿಕಾರಿಗಳಿಗೆ ಕಿವಿಮಾತು**

# ಗ್ರಾಮೀಣ ಜನತೆ ಮೂಲಸೌಕರ್ಯಗಳಿಂದ ವಂಚಿರಾಗಬಾರದು

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಜಿಲ್ಲಾ ಪಂಚಾಯತಿಯ ಉಪಕಾರ್ಯದರ್ಶಿ ಪ್ರಕಾಶ ವಡ್ಡರ ಸೋಮವಾರ ತಿಕೋಟಾ ತಾಲೂಕಿನ ತೊರವಿ ಗ್ರಾಮ ಪಂಚಾಯತಿಗೆ ಭೇಟಿ ನೀಡಿ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನೆ ನಡೆಸಿದರು.

ಆರಂಭದಲ್ಲಿ ಗ್ರಾಮ ಪಂಚಾಯತಿಗೆ ಭೇಟಿ ನೀಡಿ, ಸಿಬ್ಬಂದಿಗಳಿಗೆ ಕರ ವಸೂಲಾತಿ, ಮನರೇಗಾ ಕೂಲಿಕಾರರ ಇಕೆವೈಸಿ ಸೇರಿದಂತೆ ಇತರೆ ವಿಷಯಗಳಲ್ಲಿ ಗ್ರಾಮ ಪಂಚಾಯತಿಯ ಎಲ್ಲಾ ಸಿಬ್ಬಂದಿಗಳಿಗೆ ಕೆಲಸ ಹಂಚಿಕೆ ಮಾಡಿ ಶೀಘ್ರಗತಿಯಲ್ಲಿ ಪ್ರಗತಿ ಸಾಧಿಸಲು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಪರಿಶಿಷ್ಟ ಜಾತಿಯ ಜನರಿಗಾಗಿ ಮೀಸಲಿಟ್ಟ ಸ್ಮಶಾನ ಜಾಗದ ಒತ್ತುವರಿ ತೆರವುಗೊಳಿಸಿ ಗ್ರಾಮ ಪಂಚಾಯತಿಯಿಂದ ತಂತಿ ಬೇಲಿ ಅಳವಡಿಸಿರುವದನ್ನು ಪರಿಶೀಲನೆ ಮಾಡಿದರು.

ರಸ್ತೆ ಅಗಲೀಕರಣದಲ್ಲಿ ಮನೆ ಕಳೆದುಕೊಂಡ ಜನರಿಗಾಗಿ ಕಾಯ್ದಿರಿಸಿದ ನಿವೇಶನ ಸ್ಥಳಕ್ಕೆ ಭೇಟಿ ಸದರಿ ಸ್ಥಳದಲ್ಲಿ ಯಾವದೇ ರೀತಿಯ ಒತ್ತುವರಿಯಾಗದಂತೆ ನೋಡಿಕೊಳ್ಳಲು ಅಧಿಕಾರಿಗಳಿಗೆ ತಿಳಿಸಿದರು.ನಂತರ ಗ್ರಾಮದ ವಿವಿಧ ಬಡಾವಣೆಗಳಿಗೆ ಭೇಟಿ ನೀಡಿ, ಗ್ರಾಮದ ಜನರು ಯಾವದೇ ಕಾರಣಕ್ಕೂ ಮೂಲಭೂತ ಸೌಕರ್ಯಗಳಿಂದ ವಂಚಿರಾಗಬಾರದು ಎಂದು ಸಲಹೆ ನೀಡಿದರು.

ಇ ಸಂದರ್ಭದಲ್ಲಿ ಗ್ರಾಮ ಪಂಚಾಯತಿ ಆಡಳಿತಾಧಿಕಾರಿ ಚೇತನ ರಾಠೋಡ, ಪಂಚಾಯತಿ ಅಭಿವೃದ್ಧಿ ಅಧಿಕಾರಿ ರಾಜಶ್ರೀ ತುಂಗಳ, ಗ್ರಾಮದ ಮುಖಂಡರುಗಳಾದ ಸುರೇಶ ಬಿರಾದಾರ, ಲಾಲಪ್ಪ ಗುಡಮನಿ, ಮಂಜು ನಡಗಡ್ಡಿ, ತಾಲೂಕು ಮಾಹಿತಿ, ಶಿಕ್ಷಣ & ಸಂವಹನ ಸಂಯೋಜಕ ಕಲ್ಲಪ್ಪ ನಂದರಗಿ, ಗ್ರಾಮ ಪಂಚಾಯತಿಯ ಸಚೀನ ಕಾಂಬಳೆ, ಲಕ್ಷ್ಮೀ ಮಹಲ. ಮಲ್ಲಪ್ಪ ಸಾಲಗಲ್ಲ ಸೇರಿದಂತೆ ಇತರರಿದ್ದರು.

# ಸಂಸ್ಕಾರಯುತ ಸಮಾಜ ನಿರ್ಮಾಣಕ್ಕೆ ಆಧ್ಯಾತ್ಮದ ಪಾತ್ರ ಅನನ್ಯ

■ ಉದಯರಶ್ಮಿ ದಿನಪತ್ರಿಕೆ

ಕೊಲ್ಹಾರ: ಆಧ್ಯಾತ್ಮ ಮತ್ತು ಪುರಾಣಗಳ ಮಹತ್ವವನ್ನು ಅರಿತುಕೊಂಡು ಜೀವನದಲ್ಲಿ ಅಳವಡಿಸಿಕೊಳ್ಳಬೇಕು.

ಸಂಸ್ಕಾರಯುತ ಸಮಾಜ ನಿರ್ಮಾಣಕ್ಕೆ ಆಧ್ಯಾತ್ಮ ಮತ್ತು ಪುರಾಣಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ನಿವೃತ್ತ ಶಿಕ್ಷಕರಾದ ಬಸವರಾಜ ಹಂಗರಗಿ ಹೇಳಿದರು.

ಪಟ್ಟಣದ ದಿಗಂಬರೇಶ್ವರ ಸಂಸ್ಥಾನ ಮಠದಲ್ಲಿ ದಿಗಂಬರೇಶ್ವರ ಜಾತ್ರಾ ಮಹೋತ್ಸವದ ನಿಮಿತ್ಯ ಹಮ್ಮಿಕೊಂಡ ಮೂರು ಲೋಕದ ಗಂಡ ಬಬಲಾದಿ ಸದಾಶಿವ ಸ್ವಾಮೀಜಿಗಳ ಪುರಾಣ ಪ್ರಾರಂಭೋತ್ಸವ ಮತ್ತು ಯುಗಾದಿಯ ಹೊಸ ವರ್ಷಾಚರಣೆ ಹಾಗೂ ಬೇವು ಬೆಲ್ಲ ವಿತರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಆಧ್ಯಾತ್ಮವು ಮನಸ್ಸಿಗೆ ಶಾಂತಿ ನೀಡುವುದಲ್ಲದೆ, ಮಾನವ ಜೀವನವನ್ನು ಪಾವನಗೊಳಿಸುತ್ತದೆ ಎಂದು ಹೇಳಿದರು.

ಪುರಾಣಗಳು ಕಥೆಗಳ ಮೂಲಕ ಧರ್ಮ, ಸತ್ಯ ಮತ್ತು ನೀತಿ ಮೌಲ್ಯಗಳನ್ನು ಬೋಧಿಸುತ್ತವೆ. ಇಂದಿನ ಯುವಜನತೆ ಮತ್ತು ಮಕ್ಕಳಲ್ಲಿ ಸಂಸ್ಕಾರ ಬೆಳೆಸಲು ಪುರಾಣ ಪ್ರವಚನಗಳು ಮತ್ತು ಸತ್ಸಂಗಗಳು ಅಗತ್ಯ.

"ಇಂದಿನ ಯುಗದಲ್ಲಿ ಮಕ್ಕಳಲ್ಲಿ ಪಾಲಕರ ಮಾತು ಕೇಳುವ ಸಂಸ್ಕೃತಿ ನಿಧಾನವಾಗಿ ಕುಗ್ಗುತ್ತಿದೆ. ಸಂಸ್ಕಾರಯುತ ಶಿಕ್ಷಣ, ಸತ್ಸಂಗ ಹಾಗೂ ಧಾರ್ಮಿಕ ಚಟುವಟಿಕೆಗಳ ಮೂಲಕ ಮಕ್ಕಳಲ್ಲಿ ಹಿರಿಯರಿಗೆ ಗೌರವ ಮತ್ತು ಪಾಲಕರ ಮಾತು ಪಾಲಿಸುವ ಗುಣ ಬೆಳೆಸುವುದು ಅತ್ಯವಶ್ಯಕ," ಎಂದರು.

ಸಾನಿಧ್ಯ ವಹಿಸಿ ದಿಗಂಬರೇಶ್ವರ ಸಂಸ್ಥಾನ ಮಠದ ಕಲ್ಲಿನಾಥ ದೇವರು ಮಾತನಾಡಿ, ಮನುಷ್ಯನ ಜೀವನದಲ್ಲಿ ಕಷ್ಟಗಳು ಬರುವುದು ಸಹಜ ಅವು ಪರಿಹಾರ ಆಗದಂತಹ ಸ್ಥಿತಿಯಲ್ಲಿದ್ದಾಗ ದೇವರಲ್ಲಿ ಹರಕೆ ಹೊತ್ತು ತಮಗೆ ಬಂದಿರುವ ಸಂಕಷ್ಟಗಳು ದೂರವಾದಾಗ ದೇವರ ಹರಕೆ



ತಿರಿಸುವ ಸಂಪ್ರದಾಯ ಪ್ರತಿಯೊಬ್ಬರು ದೇವರಲ್ಲಿ ಭಯ ಭಕ್ತಿಯಿಂದ ನಡೆದಿದ್ದೆ ಆದರೆ ನಿಮ್ಮ ಜೀವನ ಪಾವನ ವಾಗಲಿದೆ ಎಂದರು.

ನಿವೃತ್ತ ಶಿಕ್ಷಕ ಪಡೆಪ್ಪ ನಾಗರಾಳ ಮಾತನಾಡಿದರು. ಕಾರ್ಯಕ್ರಮವನ್ನು ಪಟ್ಟಣ ಪಂಚಾಯಿತಿಯ ಅಧ್ಯಕ್ಷ ಚನ್ನಮಲ್ಲಪ್ಪಗಿಡ್ಡಪ್ಪಗೋಳ ಉದ್ಘಾಟಿಸಿದರು. ಸಂಗಮೇಶ್ವರ ವಿದ್ಯಾವರ್ಧಕ ಸಂಸ್ಥೆಯ ಅಧ್ಯಕ್ಷ ಬಸಪ್ಪ ಗಿಡ್ಡಪ್ಪಗೋಳ, ಈರಪ್ಪ ಜಿಡ್ಡಿಲಬಾಗಿಲ, ಬಸವರಾಜ ಕೊಠಾರಿ, ಹೂಲಗೇರಿಯ ಗುರುದೇವ ಶಾಸ್ತ್ರಿಗಳು, ಶಾಂತಪ್ಪ ಗಣಿ, ಲಕ್ಷಿಂಬಾಯಿ ಹೆರಕಲ ಸೇರಿದಂತೆ ಮಹಿಳೆಯರು ಇದ್ದರು.ನಿವೃತ್ತ ಶಿಕ್ಷಕ ಶಂಕ್ರಪ್ಪ ಪತಂಗಿ ಕಾರ್ಯಕ್ರಮ ನಿರೂಪಿಸಿದರು.

# ನಿಸರ್ಗ ನಮಗೆ ಎಲ್ಲವನ್ನೂ ಕಲಿಸುವ ಮಹಾಗುರು :ಗವಿಸಿದ್ದೇಶ್ವರ ಶ್ರೀ

■ ಉದಯರಶ್ಮಿ ದಿನಪತ್ರಿಕೆ

ಕೊಲ್ಹಾರ: ಜೀವನವೆಂದರೆ ಡೊನೇಷನ್ ಇಲ್ಲದ ಪಾಠಶಾಲೆ ಅದರಲ್ಲಿ ಪ್ರತಿಯೊಬ್ಬರೂ ಕಲಿಯಲೇಬೇಕು. ನಿಸರ್ಗವೇ ನಮಗೆ ಎಲ್ಲವನ್ನೂ ಕಲಿಸುವ ಮಹಾಗುರು ಎಂದು ಕೊಪ್ಪಳ ಸಂಸ್ಥಾನ ಶ್ರೀ ಗವಿಮಠದ ಗವಿಸಿದ್ದೇಶ್ವರ ಮಹಾಸ್ವಾಮಿಗಳು ಹೇಳಿದರು.

ತಾಲೂಕಿನ ರೋಣಿಹಾಳ ಗ್ರಾಮದಲ್ಲಿ ಎಡೆಯೂರು ಸಿದ್ಧಲಿಂಗೇಶ್ವರ ಪೂರ್ವ ಹಾಗೂ ಹಿರಿಯ ಪ್ರಾಥಮಿಕ ಪ್ರೌಢಶಾಲೆಯ ನೂತನ ಕಟ್ಟಡವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನಿಸರ್ಗವೇ ಒಂದು ಮಹತ್ವದ ಪಾಠಶಾಲೆ. ಅದು ಪ್ರತಿಯೊಂದು ವಿಷಯವನ್ನು ಮನುಷ್ಯನಿಗೆ ಕಲಿಸುತ್ತದೆ. ಆದರೆ ಕಲಿಯುವ ಮನಸ್ಸುಗಳು ನಮ್ಮೊಳಗೆ ಇರಬೇಕು. ಅಂತಹ ಮನಸ್ಸುಗಳಿದ್ದರೆ ನಿಸರ್ಗವೇ ಗುರು, ನಾವು ಶಿಷ್ಯರು. ಭೂಮಿಯಲ್ಲಿ ಬಿತ್ತಿದ ಬೀಜದಂತೆ ಮಕ್ಕಳ ಹೃದಯದಲ್ಲಿ ಬಿತ್ತಿದ ಅಕ್ಷರ ಯಾವತ್ತೂ ವ್ಯರ್ಥವಾಗುವುದಿಲ್ಲ. ಶಿಕ್ಷಣದ ಈ ಮಹತ್ವವನ್ನು ನಮ್ಮ ಹಿಂದಿನ ಹಿರಿಯರು ಚೆನ್ನಾಗಿ ಅರಿತಿದ್ದರು ಎಂದು ಹೇಳಿದರು.

ಸಣ್ಣ ಗ್ರಾಮದಲ್ಲೇ ಇಂತಹ ಸುಸಜ್ಜಿತ ಶಾಲೆಯನ್ನು ನಿರ್ಮಿಸಿ ಶಿಕ್ಷಣ ಸಂಸ್ಥೆಯನ್ನು ಬೆಳೆಸುವುದು ಸುಲಭವಲ್ಲ. ಈ ಊರಿನ ಹಿರಿಯರು ಉತ್ತಮ ವಾತಾವರಣದಲ್ಲಿ ಶಾಲೆ ಕಟ್ಟಿಸಿ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುವ ಕಾರ್ಯ



ಮಾಡಿದ್ದಾರೆ ಎಂದು ಪ್ರಶಂಸಿಸಿದರು.ಕಾಖಂಡಕಿ ಗ್ರಾಮದ ಗುರುದೇವಾಶ್ರಮದ ಶಿವಯೋಗೀಶ್ವರ ಮಹಾಸ್ವಾಮೀಜಿ ಮಾತನಾಡಿ, ಮಕ್ಕಳ ಭವಿಷ್ಯ ನಿರ್ಮಾಣದಲ್ಲಿ ಊರಿನ ಹಿರಿಯರು ಹಾಗೂ ಶಿಕ್ಷಕರ ತ್ಯಾಗ ಅತ್ಯಂತ ಮಹತ್ವದ್ದು. ರೋಣಿಹಾಳ ಗ್ರಾಮದಲ್ಲಿ ಮಹಾತಪಸ್ವಿಗಳಾದ ಎಡೆಯೂರು ಸಿದ್ಧಲಿಂಗೇಶ್ವರ ಸ್ವಾಮಿಗಳ ಹೆಸರಿನಲ್ಲಿ ಶಿಕ್ಷಣ ಸಂಸ್ಥೆ ಸ್ಥಾಪಿಸಿರುವುದು ಸಂತೋಷದ ಸಂಗತಿ ಎಂದರು.

ಮಕ್ಕಳು ಏನು ಕಲಿಯುತ್ತಾರೆ ಎಂಬುದಕ್ಕಿಂತ ಅವರು ಯಾವ ಸಂಸ್ಕಾರಗಳನ್ನು ಪಡೆಯುತ್ತಾರೆ ಎಂಬುದು ಹೆಚ್ಚು ಮುಖ್ಯ. ಶಾಲೆಯಲ್ಲಿ ನೈತಿಕ ಮೌಲ್ಯಗಳು, ಸದ್ಗುಣಗಳು ಹಾಗೂ ಒಳ್ಳೆಯ ಸಂಸ್ಕಾರಗಳನ್ನು ಮಕ್ಕಳಿಗೆ ಕಲಿಸುವ ಕಾರ್ಯವಾಗಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಎಡೆಯೂರು ಸಿದ್ಧಲಿಂಗೇಶ್ವರ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ರಮೇಶ ಮಮದಾಪೂರ, ಮುಖಂಡರಾದ ಶರಣು ಸಾವುಕಾರ ನ್ಯಾಮಗೌಡ್ರ, ಪೂಜ್ಯರಾದ ರಾಜಶೇಖರಯ್ಯ ಹಿರೇಮಠ, ರಾಚೋಟಯ್ಯ ಹಿರೇಮಠ ಹಾಗೂ ಮಹಾಂತಯ್ಯ ಮಠಪತಿ ಉಪಸ್ಥಿತರಿದ್ದರು.

**ಪಶುವೈದ್ಯೆ ಡಾ.ಸಮೀಕ್ಷಾ ರೆಡ್ಡಿ ನಿಧನಕ್ಕೆ ಕರ್ನಾಟಕ ಪಶು ವೈದ್ಯಕೀಯ ಸಂಘದ ರಾಜ್ಯಾಧ್ಯಕ್ಷ ಡಾ.ಶಿವಶರಣಪ್ಪ ಜಿ.ಯಲಗೋಡ, ಪ್ರಧಾನ ಕಾರ್ಯದರ್ಶಿ ಡಾ.ರಾಮಚಂದ್ರಯ್ಯ ಎಂ ಸಂತಾಪ**

# ಡಾ.ಸಮೀಕ್ಷಾ ಸಾವಿನ ಕುರಿತು ನ್ಯಾಯಾಂಗ ತನಿಖೆಗೆ ಪಶು ವೈದ್ಯಕೀಯ ಸಂಘ ಆಗ್ರಹ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಶಿವಮೊಗ್ಗದ ಮೃಗಾಲಯದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಪಶುವೈದ್ಯೆ ಡಾ.ಸಮೀಕ್ಷಾ ರೆಡ್ಡಿಯವರು, ನೀರಾನೆಗೆ ಚಿಕಿತ್ಸೆ ನೀಡುವ ಸಂದರ್ಭದಲ್ಲಿ ದಾಳಿಗೊಳಗಾಗಿ ಇತ್ತೀಚೆಗೆ ಮೃತರಾಗಿದ್ದು, ಅವರ ನಿಧನವು ಪಶುವೈದ್ಯಕೀಯ ವೃತ್ತಿಗೆ ತುಂಬಲಾರದ ನಷ್ಟವನ್ನುಂಟು ಮಾಡಿದೆ ಎಂದು ಕರ್ನಾಟಕ ಪಶು ವೈದ್ಯಕೀಯ ಸಂಘ ರಾಜ್ಯಾಧ್ಯಕ್ಷ ಡಾ.ಶಿವಶರಣಪ್ಪ ಜಿ.ಯಲಗೋಡ ಮತ್ತು ಪ್ರಧಾನ ಕಾರ್ಯದರ್ಶಿ ಡಾ.ರಾಮಚಂದ್ರಯ್ಯ ಎಂ ಸಂತಾಪ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಸೋಮವಾರ ಪತ್ರಿಕಾ ಪ್ರಕಟಣೆ ಹೊರಡಿಸಿದ ಅವರು, ಡಾ.ಸಮೀಕ್ಷಾ ರೆಡ್ಡಿ ನಿಧನಕ್ಕೆ ಕರ್ನಾಟಕ ಪಶು ವೈದ್ಯಕೀಯ ಸಂಘವು ತೀವ್ರ ಸಂತಾಪ ವ್ಯಕ್ತಪಡಿಸುತ್ತದೆ ಎಂದಿದ್ದಾರೆ.

ವನ್ಯಜೀವಿ ಪಶುವೈದ್ಯಕೀಯ ಸೇವೆಯನ್ನು ಉತ್ಸಾಹದಿಂದಲೇ ಆಯ್ಕೆ ಮಾಡಿಕೊಂಡು ನಿಷ್ಠೆಯಿಂದ ಕರ್ತವ್ಯ ನಿರ್ವಹಿಸುತ್ತಿದ್ದ ಡಾ.ಸಮೀಕ್ಷಾ ರೆಡ್ಡಿಯವರು ಕರ್ತವ್ಯಕ್ಕೆ ಹಾಜರಾದ ಕೇವಲ 1 ಱ ತಿಂಗಳಲ್ಲೇ ನಿರಾನೆ ದಾಳಿಗೆ ತುತ್ತಾಗಿರುವುದು ದುರದೃಷ್ಟಕರ.

ಡಾ.ಸಮೀಕ್ಷಾ ರೆಡ್ಡಿಯವರ ಸಾವಿನ ಕುರಿತಾಗಿ ಅರಣ್ಯ ಇಲಾಖೆಯ ಹಿರಿಯ ಅಧಿಕಾರಿಗಳು ನೀಡುತ್ತಿರುವ ಮಾಧ್ಯಮ ಹೇಳಿಕೆಗಳು, ಪತ್ರಿಕಾ ಪ್ರಕಟಣೆ ಮತ್ತು ಸಾಂದರ್ಭಿಕ ಸನ್ನಿವೇಶಗಳು ಒಂದಕ್ಕೊಂದು ಗೊಂದಲದಿಂದ ಕೂಡಿದ್ದು, ಈಗಾಗಲೇ ಮೂರ್ನಾಲ್ಕು ದಿನಗಳಿಂದ ಚಿಕಿತ್ಸಾ ಮಾರ್ಗ ಸೂಚಿಯಲ್ಲಿದ್ದ ಣಟಿ ಛಿಂಟಣಡಿಜ ಪಕ್ಷಿ ಮತ್ತು ನೀರಾನೆಯ ಚಿಕಿತ್ಸೆಗೆ ದಿನಾಂಕ: 19.03.2026ರ ತಡರಾತ್ರಿ ತನ್ನ ವಾಸ್ತವ್ಯದಲ್ಲಿದ್ದ ಡಾ.ಸಮೀಕ್ಷಾ ರೆಡ್ಡಿರವರನ್ನು ಒಬ್ಬಂಟಿಯಾಗಿ ಕರೆತರುವ ಧಾವಂತವಾದರೂ ಏನಿತ್ತು? ಈ ಕರ್ತವ್ಯಕ್ಕೆ ಯಾವುದೇ ಸುರಕ್ಷತಾ ವಿಧಿವಿಧಾನಗಳಿಲ್ಲದೇ ತಡರಾತ್ರಿಯಲ್ಲಿ ಒಬ್ಬ ಮಹಿಳಾ ಪಶುವೈದ್ಯರನ್ನು ತನ್ನ ವಾಸ್ತವ್ಯದಿಂದ ಮೃಗಾಲಯಕ್ಕೆ ಕರೆತರಲು ನಿರ್ದೇಶನ ನೀಡಿದವರಾರು? ಈ ರೀತಿ ಹಲವು ಅನುಮಾನಗಳ ಹಿನ್ನೆಲೆಯಲ್ಲಿ ಉಪ ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ಶಿವಮೊಗ್ಗ ಜಿಲ್ಲಾ ಮೃಗಾಲಯ, ಹುಲಿ ಮತ್ತು ಸಿಂಹಧಾಮದ ಕಾರ್ಯನಿರ್ವಾಹಕ ನಿರ್ದೇಶಕರಾದ ಅಮರಾಕ್ಷರ್, ವಿ.ಎಂ.ರವರ ಮೂಗಿನ ಕೆಳಗೆ ಅವರ ನೇರ ನಿರ್ದೇಶನದಂತೆ ಮೃಗಾಲಯದ ಪ್ರತಿಯೊಂದು ಕರ್ತವ್ಯಗಳನ್ನು ನಿರ್ವಹಿಸಲಾಗುತ್ತಿದ್ದರೂ ಇವರ ಕರ್ತವ್ಯ ಲೋಪವೇ ಡಾ.ಸಮೀಕ್ಷಾ ರೆಡ್ಡಿಯವರ ಅಕಾಲಿಕ ಮರಣಕ್ಕೆ ನೇರ ಹೊಣೆ ಯಾಗಿದ್ದರೂ ಮಾಧ್ಯಮಗಳಿಗೆ ಮಾಹಿತಿ ನೀಡುವ ಸಂದರ್ಭದಲ್ಲಿ ಪಶ್ಚಾತ್ತಾಪ ವ್ಯಕ್ತಪಡಿಸುವ ಬದಲಾಗಿ, ಒಬ್ಬ ಮಹಾನ್ ಪಶುವೈದ್ಯ ತಜ್ಞರಂತೆ ಮೃತ ಪಶುವೈದ್ಯರ ತಾಂತ್ರಿಕ ಸಮರ್ಥತೆಯ ಬಗ್ಗೆ ಟೀಕಿಸಿ ಉದ್ದಟತನ ಮೆರೆದಿರುವ ಅಮರಾಕ್ಷರ್, ವಿ.ಎಂ.ರವರನ್ನು ಈ ಕೂಡಲೇ ಅಮಾನತ್ತುಗೊಳಿಸಿ, ಘಟನೆ ಕುರಿತು ತನಿಖೆ ನಡೆಸಲು ಘಟನೆಯ ನೈತಿಕ ಹೊಣೆ ಹೊತ್ತು ಆರೋಪಿ ಸ್ಥಾನದಲ್ಲಿ ನಿಲ್ಲಬೇಕಾದ ಇಲಾಖೆಯ ಹಿರಿಯ ಅಧಿಕಾರಿಗಳ ನೇತೃತ್ವದಲ್ಲಿ ತನಿಖಾ ಸಮಿತಿ ರಚಿಸಿರುವುದು ಕುರಿ ಕಾಯಲು ತೋಳ ನೇಮಿಸಿದಂತಾಗಿದ್ದು ಘಟನೆ ಕುರಿತು ನಿಷ್ಪಕ್ಷಪಾತ ತನಿಖೆ ಅಸಾಧ್ಯ. ಇದರಿಂದ ಪ್ರಕರಣದ ತನಿಖೆ ದಿಕ್ಕು ತಪ್ಪಿ ತಪ್ಪಿತಸ್ಥರಿಗೆ ಶಿಕ್ಷೆಯಾಗುವ ಮತ್ತು ಪಶುವೈದ್ಯೆಯ ಸಾವಿಗೆ ನ್ಯಾಯ ದೊರಕುವ ಭರವಸೆ ಇಲ್ಲದಿರುವ ಹಿನ್ನೆಲೆಯಲ್ಲಿ, ಘಟನೆಯ ಕುರಿತಂತೆ ನ್ಯಾಯಾಂಗ ತನಿಖೆ ನಡೆಸುವಂತೆ ಮತ್ತು ಮೃತರ ಕುಟುಂಬಕ್ಕೆ ಕೂಡಲೇ ಕನಿಷ್ಠ 1.0 ಕೋಟಿಗಳ ಪರಿಹಾರ ಪಾವತಿಸುವಂತೆ ಕರ್ನಾಟಕ ಪಶು ವೈದ್ಯಕೀಯ ಸಂಘವು ಸರ್ಕಾರವನ್ನು ಅಗ್ರಹಿಸುತ್ತದೆ ಎಂದಿದ್ದಾರೆ.



ಅರಣ್ಯ ಇಲಾಖೆ ಮತ್ತು ಮೃಗಾಲಯ ಪ್ರಾಧಿಕಾರಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪಶುವೈದ್ಯರ ಮೇಲಿನ ಪ್ರಾಣಿ ದಾಳಿ ಇದೇ ಮೊದಲಲ್ಲ. ಅರಣ್ಯ ಇಲಾಖೆ ಮತ್ತು ಮೃಗಾಲಯದ ಪ್ರಾಧಿಕಾರಗಳ ವಿವಿಧ ವನ್ಯಜೀವಿ ತಾಣಗಳಲ್ಲಿ ಕರ್ತವ್ಯ ನಿರ್ವಹಿಸಿದ/ನಿರ್ವಹಿಸುತ್ತಿರುವ ಎಲ್ಲಾ ಪಶುವೈದ್ಯರೂ ವನ್ಯಜೀವಿಗಳಿಂದ ಮಾರಣಾಂತಿಕ ದಾಳಿಗೆ ತುತ್ತಾಗಿ ಜೀವನ್ಮರಣದ ನಡುವೆ ತಿಂಗಳುಗಟ್ಟಲೆ ಆಸ್ಪತ್ರೆಯಲ್ಲಿ ಕಳೆದಿರುವ ಮತ್ತು ನಿಧನ ಹೊಂದಿರುವ ಘಟನೆಗಳು ಅವ್ಯಾಹತವಾಗಿದ್ದರೂ ಈ ಕುರಿತು ಯಾವುದೇ ನಿರ್ದಿಷ್ಟ ಮುಂಜಾಗೃತ ಕ್ರಮಗಳನ್ನು ಕೈಗೊಳ್ಳದಿರುವುದು ಅರಣ್ಯ ಇಲಾಖೆಯ ವೈಫಲ್ಯದ ದ್ಯೋತಕ ವಾಗಿದ್ದು ಪಶುವೈದ್ಯರ ಜೀವಕ್ಕೆ ಬೆಲೆಯಿಲ್ಲದಂತಾಗಿದೆ. ಪಶುವೈದ್ಯರಲ್ಲದವರು ವನ್ಯಜೀವಿಗಳ ಆರೋಗ್ಯ ರಕ್ಷಣೆ ಕುರಿತಂತೆ ನಿಯಮ ರೂಪಿಸುವುದು, ಆದೇಶ/ನಿರ್ದೇಶನ ನೀಡುವುದು ಮತ್ತು ವ್ಯವಸ್ಥೆಯನ್ನು ನಿರ್ವಹಣೆ ಮಾಡುತ್ತಿರುವುದು ಅರಣ್ಯ ಇಲಾಖೆಯ ವನ್ಯಜೀವಿ ವಿಭಾಗದ ಹಾಗೂ ಮೃಗಾಲಯ ಪ್ರಾಧಿಕಾರಗಳ ಅವೈಜ್ಞಾನಿಕ ಮತ್ತು ನಿಯಮಬಾಹಿರ ನಿರ್ವಹಣೆಗೆ ಹಿಡಿದ ಕನ್ನಡಿಯಾಗಿದೆ. ಅರಣ್ಯ ಇಲಾಖೆ ಮತ್ತು ಮೃಗಾಲಯ ಪ್ರಾಧಿಕಾರಗಳ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ಸೂಕ್ತ ತಿದ್ದುಪಡಿ ತಂದು ಖಾಯಂ ಪಶು ವೈದ್ಯರನ್ನು ನೇಮಕ ಮಾಡಿಕೊಂಡು ವನ್ಯಜೀವಿ ಪಶುವೈದ್ಯಕೀಯ ಸೇವೆ ಯನ್ನು ಸಂಘಟಿತಗೊಳಿಸುವ ಕುರಿತು ಈಗಾಗಲೇ, ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಅರಣ್ಯ ಸಚಿವರಿಗೆ ಮತ್ತು ಮಾನ್ಯ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿತ್ತಾದರೂ ಯಾವುದೇ ಪ್ರಯೋಜನವಾಗಿಲ್ಲ. ಅರಣ್ಯ ಇಲಾಖೆ ಮತ್ತು ಮೃಗಾಲಯ ಪ್ರಾಧಿಕಾರಗಳು ಈ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾಗಲು ಇನ್ನೆಷ್ಟು ವನ್ಯಜೀವಿಗಳ ಮತ್ತು ಪಶುವೈದ್ಯರ ಬಲಿ ಪಡೆಯಬೇಕೋ ತಿಳಿಯದಾಗಿದೆ. ಪಶುವೈದ್ಯರ ಸಮಾಧಿಯ ಮೇಲೆ ಕರ್ತವ್ಯದ ಪತಾಕೆ ಹಾರಿಸುತ್ತಿರುವ ಅರಣ್ಯ ಇಲಾಖೆ ಮತ್ತು ಮೃಗಾಲಯ ಪ್ರಾಧಿಕಾರಗಳ ಧೋರಣೆಯನ್ನು ಕರ್ನಾಟಕ ಪಶುವೈದ್ಯಕೀಯ ಸಂಘವು ತೀವ್ರವಾಗಿ ಖಂಡಿಸುತ್ತದೆ ಎಂದಿದ್ದಾರೆ.

ಮಂಗಳವಾರ ಮಾ.24 ರಂದು ರಾಜ್ಯದಾದ್ಯಂತ ವೃತ್ತಿನಿರತ ಪಶುವೈದ್ಯರು ಅಕಾಲಿಕ ಮರಣ ಹೊಂದಿದ ಡಾ.ಸಮೀಕ್ಷಾ ರೆಡ್ಡಿ ಯವರಿಗೆ ಶ್ರದ್ಧಾಂಜಲಿ ಸಭೆ ನಡೆಸಿ, ಅವರ ಸಾವಿಗೆ ಕಾರಣವಾಗಿರುವ ಶ್ರೀ.ಅಮರಾಕ್ಷರ್, ವಿ.ಎಂ. ರವರನ್ನು ತಕ್ಷಣ ಅಮಾನತ್ತು ಮಾಡಿ, ಘಟನೆಯ ಕುರಿತು ನ್ಯಾಯಾಂಗ ತನಿಖೆ ನಡೆಸಲು ಹಾಗೂ ಮೃತರ ಕುಟುಂಬಕ್ಕೆ ಕನಿಷ್ಠ ಒಂದು ಕೋಟಿಗಳ ಪರಿಹಾರ ಧನ ಬಿಡುಗಡೆ ಮಾಡಲು ಮತ್ತು ಅರಣ್ಯ ಇಲಾಖೆ ಹಾಗೂ ಮೃಗಾಲಯ ಪ್ರಾಧಿಕಾರಗಳಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ಮಾಡಿ ಪಶುವೈದ್ಯರ ಖಾಯಂ ನೇಮಕಾತಿ ಮಾಡಿ ಕೊಂಡು ಅರಣ್ಯ ಇಲಾಖೆಯ ವನ್ಯಜೀವಿ ವಿಭಾಗ ಹಾಗೂ ಮೃಗಾಲಯದ ಪ್ರಾಧಿಕಾರಗಳ ಸಂಪೂರ್ಣ ಹೊಣೆಗಾರಿಕೆಯನ್ನು ಪಶುವೈದ್ಯರಿಗೆ ನೀಡಲು ಸರ್ಕಾರವನ್ನು ಆಗ್ರಹಿಸಿ ಕಪ್ಪುಪಟ್ಟಿ ಧರಿಸಿ ದೈನಂದಿನ ಕರ್ತವ್ಯಕ್ಕೆ ಹಾಜ ರಾಗುವ ಮೂಲಕ ಸಾಂಕೇತಿಕ ಪ್ರತಿಭಟನೆ ಹಮ್ಮಿಕೊಂಡಿದ್ದು, ಈ ಕುರಿತು ಅರಣ್ಯ ಇಲಾಖೆ ಮತ್ತು ಮೃಗಾಲಯ ಪ್ರಾಧಿಕಾರಗಳು ಸೂಕ್ತ ನಿರ್ಧಾರ ಕೈಗೊಳ್ಳದಿದ್ದಲ್ಲಿ ರಾಜ್ಯದಾದ್ಯಂತ ಅರಣ್ಯ ಇಲಾಖೆ ಮತ್ತು ಮೃಗಾಲಯ ಪ್ರಾಧಿ ಕಾರಗಳಿಗೆ ಸಂಬಂಧಿಸಿದ ಎಲ್ಲಾ ಪಶುವೈದ್ಯಕೀಯ ಸೇವೆಯನ್ನು ನಿಲ್ಲಿಸಲು ಮತ್ತು ಪ್ರಸ್ತುತ ಅರಣ್ಯ ಇಲಾಖೆ ಮತ್ತು ಮೃಗಾಲಯ ಪ್ರಾಧಿಕಾರಗಳಲ್ಲಿ ನಿಯೋಜನೆ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಪಶುವೈದ್ಯರು ಮಾತೃ ಇಲಾಖೆಗೆ ಹಿಂದಿರುಗುವ ಕುರಿತು ತೀರ್ಮಾನ ಕೈಗೊಳ್ಳಲಾಗಿ ಕೈಗೊಳ್ಳಲಾಗುವುದು ಎಂದು ಅಧ್ಯಕ್ಷ ಡಾ.ಶಿವಶರಣಪ್ಪ ಜಿ.ಯಲಗೋಡ ಮತ್ತು ಪ್ರಧಾನ ಕಾರ್ಯದರ್ಶಿ ಡಾ.ರಾಮಚಂದ್ರಯ್ಯ ಎಂ. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



# ಮಾನವ ಕುಲಕ್ಕೆ ವಚನಗಳ ಮೂಲಕ ಸನ್ಮಾರ್ಗ ತೋರಿದ ದೇವರ ದಾಸಿಮಯ್ಯ



■ ಉದಯ ರಶ್ಮಿ ದಿನಪತ್ರಿಕೆ

ಕಾಳಗಿ :ಇಡೀ ಮಾನವ ಕುಲಕ್ಕೆ ಸನ್ಮಾರ್ಗವನ್ನು ತಮ್ಮ ವಚನಗಳ ಮೂಲಕ ತೋರಿಸಿದ ಆದ್ಯ ವಚನಕಾರ ದೇವರ ದಾಸಿಮಯ್ಯ ಸರ್ವ ಸಮುದಾಯಗಳಿಗೆ ಮಾದರಿಯಾಗಿದ್ದಾರೆ ಎಂದು ಪಟ್ಟಣ ಪಂಚಾಯತ ಮುಖ್ಯಾಧಿಕಾರಿ ಪಂಕಜಾ ಎ ಹೇಳಿದರು. ಪಟ್ಟಣ ಪಂಚಾಯತನಲ್ಲಿ ಹಮ್ಮಿಕೊಂಡಿದ್ದ ಆದ್ಯ ವಚನಕಾರ ದೇವರ ದಾಸಿಮಯ್ಯ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ವಚನಗಳನ್ನು ಆಲಿಸುವುದರಿಂದ ಜೀವನದಲ್ಲಿ ಸ್ಫೂರ್ತಿ ಹೆಚ್ಚುತ್ತದೆ. ಸರಿಯಾದ ದಾರಿಯಲ್ಲಿ ನಡೆಯುವ ಮೂಲಕ ಜೀವನ ಸಾರ್ಥಕ ಮಾಡಿಕೊಳ್ಳಲು ಶರಣ-ರ ವಚನಗಳು ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು. ಈ ವೇಳೆಯಲ್ಲಿ ಶಿವಕುಮಾರ ಶಾಸ್ತ್ರಿ ಮಾತನಾಡಿದರು.

ದೇವಾಂಗ ಸಮಾಜದ ತಾಲೂಕು ಅಧ್ಯಕ್ಷ ರೇವಣಸಿದ್ಧ ಮುಗಳಿ, ತಾಲೂಕು ಸಮಾಜದ ಅಧ್ಯಕ್ಷ ಗಣೇಶ ಸಿಂಗಶೆಟ್ಟಿ, ಪ.ಪಂ ಸದಸ್ಯ ರಮೇಶ ಕಿಟ್ಟದ, ಗುರುರಾಜ ಮದ್ದೂರ, ಶರಣಪ್ಪ ಬೇಲೂರ, ಗಣಪತರಾವ ಸಿಂಗಶೆಟ್ಟಿ, ಪರಮೇಶ್ವರ ಮಡಿವಾಳ, ಈರಣ್ಣ ಟೆಂಗಳಿಕರ, ಶರಣಪ್ಪ ಕಿಟ್ಟದ, ಕೃಷ್ಣ ಸಿಂಗಶೆಟ್ಟಿ, ಮಲ್ಲಿಕಾರ್ಜುನ ಟೆಂಗಲೀಕರ, ಬಾಬು ಹೀರಾಪುರ, ರೀತಿಕೇಶ ಅಡಕಿ ಸೇರಿದಂತೆ ಅನೇಕರಿದ್ದರು.

# ಆದ್ಯ ವಚನಕಾರ ದೇವರ ದಾಸಿಮಯ್ಯ ಜಯಂತಿ ಆಚರಣೆ



■ ಉದಯ ರಶ್ಮಿ ದಿನಪತ್ರಿಕೆ

ಚಿತ್ತಾಪುರ:ಪಟ್ಟಣದ ಹಟಗಾರ ಸಮಾಜದ ವತಿಯಿಂದ ಇಲ್ಲಿನ ಶ್ರೀ ಚೌಡಮ್ಮ ದೇವಸ್ಥಾನದಲ್ಲಿ 11ನೇ ಶತಮಾನದ ಆದ್ಯ ವಚನಕಾರ, ಶಿವಶರಣ ದೇವರ ದಾಸಿಮಯ್ಯನವರ ಜಯಂತಿಯನ್ನು ಅತ್ಯಂತ ಸಡಗರ ಹಾಗೂ ಭಕ್ತಿ-ಭಾವದಿಂದ ಆಚ-ರಿಸಲಾಯಿತು.

ಕಾರ್ಯಕ್ರಮದ ಅಂಗವಾಗಿ ಹಟಗಾರ ಸಮಾಜದ ಅಧ್ಯಕ್ಷರಾದ ಬಸವರಾಜ ರಾಜೋಳ್ಳಿ ಅವರು ದೇವರ ದಾಸಿಮಯ್ಯನವರ ಭಾವಚಿತ್ರಕ್ಕೆ ವಿಶೇಷ ಪೂಜೆ ಸಲ್ಲಿಸಿ, ಪುಷ್ಪಾರ್ಚನೆ ಮಾಡುವ ಮೂಲಕ ಗೌರವ ನಮನ ಸಲ್ಲಿಸಿದರು.ಬಳಿಕ ಮಾತನಾಡಿದ ಅವರು, ವಚನ ಸಾಹಿತ್ಯಕ್ಕೆ ಭದ್ರ ಅಡಿಪಾಯ ಹಾಕಿದ ದಾಸಿಮಯ್ಯನವರ'ರಾಮನಾಥ' ಅಂಕಿತನಾಮದ ವಚನಗಳು ಇಂದಿನ ಸಮಾಜ-ಕ್ಕೆ ದಾರಿದೀಪವಾಗಿವೆ. ನೇಯ್ಗೆ ಕಾಯಕದ ಮೂಲಕವೇ ಕೈಲಾಸ ಕಂಡ ದಾಸಿಮಯ್ಯನವರ ತತ್ವ ಮತ್ತು ಆದರ್ಶಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು," ಎಂದು ಸ್ಮರಿಸಿದರು.

ಈ ಸಂದರ್ಭದಲ್ಲಿ ಹಟಗಾರ ಸಮಾಜದ ಪ್ರಮುಖ ಮುಖಂಡರಾದ ರಾಚಣ್ಣ ವೈಕುಂಠ, ವಾಸುದೇವ ಗಂಜಿ, ಬಸವರಾಜ ಖ್ಯಾಲಾ, ರಾಚಣ್ಣ ಕಾಳಗಿ, ರಾಜಶೇಖರ ಬಳ್ಳಾ, ಚೆನ್ನಪ್ಪ ಜಾಡರ, ಅಯ್ಯಣ್ಣ ಅಲ್ಲಮ, ಶಿವಕುಮಾರ ಶೀಲವಂತ ಹಾಗೂ ರಾಜು ಮದಗುಂಟಿ ಸೇರಿದಂತೆ ಸಮಾಜದ ಹಿರಿಯರು ಮತ್ತು ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಜಯಂತಿಯನ್ನು ಯಶಸ್ವಿಗೊಳಿಸಿದರು.

# ಸ್ವಾತಂತ್ರ್ಯ ಹೋರಾಟಗಾರರ ಬಲಿದಾನ ಮರೆಯುವಂತಿಲ್ಲ



■ ಉದಯ ರಶ್ಮಿ ದಿನಪತ್ರಿಕೆ

ಕಲಬುರಗಿ: ಭಗತಸಿಂಗ್,ಸುಖದೇವ ಮತ್ತು ರಾಜಗುರು ಅವರು ಬ್ರಿಟೀಷರನ್ನು ಭಾರತದಿಂದ ಹೊಡೆದೋಡಿಸಿ, ನಮ್ಮ ದೇಶಕ್ಕೆ ಸ್ವಾತಂತ್ರ್ಯವನ್ನು ನೀಡುವಲ್ಲಿ ಸಾಕಷ್ಟು ಪ್ರಯತ್ನಿಸಿದ್ದಾರೆ.ಅದಕ್ಕಾಗಿ ಬಾಲ್ಯದಲ್ಲಿಯೇ ನೇಣುಗಂಬ ಏರಿದ ಅವರು ಸ್ವಾತಂತ್ರ್ಯ ಹೋರಾಟದ ತ್ರಿರತ್ನಗಳಾಗಿದ್ದಾರೆ. ಅವರಲ್ಲಿರುವ ಅಪ್ಪಟ ದೇಶಭಕ್ತಿ ಇಂದಿನ ಯುವಕರಿಗೆ ಮಾದರಿಯಾಗಿದ್ದು, ಅವರ ಬಲಿದಾನ ಅಮರವಾಗಿದೆ ಎಂದು ಉಪನ್ಯಾಸಕ ಎಚ್.ಬಿ.ಪಾಟೀಲ ಅಭಿಪ್ರಾಯಪಟ್ಟರು.

ನಗರದ 'ಜೆ.ಆರ್ ನಗರದ ಖಾದ್ರಿ ಚೌಕ್ ಹತ್ತಿರದ 'ಸಕ್ಸಸ್ ಕಂಪಯೂಟರ ತರಬೇತಿ ಸಂಸ್ಥೆ'ಯಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಜರುಗಿದ ಭಗತಸಿಂಗ, ಸುಖದೇವ ಮತ್ತು ರಾಜಗುರು ಹುತಾತ್ಮ ದಿನಾಚರಣೆಯಲ್ಲಿ ಪುಷ್ಪ ನಮನಗಳನ್ನು ಸಲ್ಲಿಸಿ ಅವರು ಮಾತನಾಡುತ್ತಿದ್ದರು.

ಬ್ರಿಟಿಷರಿಗೆ ಸಿಂಹ ಸ್ವಪ್ನರಾಗಿ ಕಾಡಿದ್ದ ಭಗತಸಿಂಗ, ಸುಖದೇವ ಮತ್ತು ರಾಜಗುರು ಅಪ್ಪಟ ದೇಶಭಕ್ತರಾಗಿದ್ದಾರೆ. ಇಂತಹ ಸ್ವಾತಂತ್ರ ಹೋರಾಟಗಾರರೇ ದೇಶದ ನೈಜ ಹಿರೋಗಳಾಗಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷ ಅಸ್ಲಾಂ ಶೇಖ್, ಬಳಗದ ಗೌರವ ಸಲಹೆಗಾರ ಶಿವಯೋಗೆಪಾ ಎಸ್.ಬಿರಾದಾರ ಹಾಗೂ ಶಿಕ್ಷಕಿಯರು, ವಿದ್ಯಾರ್ಥಿಗಳಿದ್ದರು.

# ಮಹಿಳೆ-ಪುರುಷ ಸಮಾನತೆ: ಪುರುಷರ ದಿನಾಚರಣೆಗೂ ಮಹತ್ವ ನೀಡಬೇಕು :ಕಟಕೆ

■ ಉದಯ ರಶ್ಮಿ ದಿನಪತ್ರಿಕೆ



ಕಲಬುರಗಿ: ಬೀದರ ಮತ್ತು ಕಲಬುರಗಿ ಜಿಲ್ಲೆಗಳ ಡಿಜಿಟಲ್ ಸಖಿ ಯೋಜನೆಯಡಿ, ಅಕ್ಸಸ್ ಲಿವಲಿಹೂಡ್ಸ್ ಹಾಗೂ ಎಲ್ ಅಂಡ್ ಟಿ ಫೈನಾನ್ಸ್ ಸಹಯೋಗದಲ್ಲಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ನಗರದ ಕನ್ನಡ ಭವನದಲ್ಲಿ ವಿಜೃಂಭಣೆಯಿಂದ ಆಚರಿಸಲಾಯಿತು.

ಕಾರ್ಯಕ್ರಮವನ್ನು ರಾಘವೇಂದ್ರ ಪೊಲೀಸ್ ಸ್ಟೇಷನ್‌ನ ಪಿಎಸ್‌ಐ ಯಶೋಧ ಕಟಕೆ ಉದ್ಘಾಟಿಸಿ ಮಾತನಾಡಿ, "ಮಹಿಳೆ ಮತ್ತು ಪುರುಷರು ಸಮಾಜದ ಎರಡು ಕಣ್ಣುಗಳಂತೆ. ಇಬ್ಬರೂ ಸಮಾನರಾಗಿದ್ದು, ಮಹಿಳಾ ದಿನಾಚರಣೆಯ ಜೊತೆಗೆ ಪುರುಷರ ದಿನಾಚರಣೆಯನ್ನೂ ಆಚರಿಸುವುದು ಅಗತ್ಯ" ಎಂದು ಹೇಳಿದರು.

ಡಿಜಿಟಲ್ ಸಖಿ ಯೋಜನೆಯ ಕ್ಲಸ್ಟರ್ ಮ್ಯಾನೇಜರ್ ವಿಜಯಲಕ್ಷ್ಮಿ ಅವರು ಕಾರ್ಯಕ್ರಮದ ಪರಿಚಯ ನೀಡಿ ಯೋಜನೆಯ ಉದ್ದೇಶ ಮತ್ತು ಕಾರ್ಯಚಟುವಟಿ-ಕೆಗಳ ಬಗ್ಗೆ ಮಾಹಿತಿ ನೀಡಿದರು. ಮುಖ್ಯ ಅತಿಥಿಗಳಾಗಿ ಅಡ್ವೋಕೇಟ್ ಶ್ರೀಮತಿ ರೇಣುಕಾ ಬಿರಾದಾರ್ ಹಾಗೂ ಬಸವ ಟ್ರೇಡರ್ಸ್ ಸಂಸ್ಥಾಪಕ ಮಹೇಶ್ ಗಿರಾಣಿ ಭಾಗವಹಿಸಿದ್ದರು. ಈ ವೇಳೆ ರೇಣುಕಾ ಬಿರಾದಾರ್ ಮಹಿಳಾ ಸಬಲೀಕರಣದ ಅಗತ್ಯತೆಯನ್ನು ವಿವ-ರಿಸಿದರು.

ಅತಿಥಿಗಳಾಗಿ ಮಲ್ಲಮ್ಮ ಕಾಡ್ಲಾ, ವಿಜಯಲಕ್ಷ್ಮಿ ಆರ್ ಶೀಲವಂತ್, ಶ್ರೀಪಾದ ಕುಲಕರ್ಣಿ, ಗೋಪಾಲ್ ಕುಲಕರ್ಣಿ, ಕವಿತಾ ನಾಯ್ಡು ಹಾಗೂ ಜಯಶ್ರೀ ಎಸ್ ಮಠ್ ಉಪಸ್ಥಿತರಿದ್ದರು. ಶ್ರೀ ಶಕ್ತಿ ಒಕ್ಕೂಟದ ಅಧ್ಯಕ್ಷೆ ಮಲ್ಲಮ್ಮ ಕಾಡ್ಲಾ ಅವರು ಡಿಜಿಟಲ್ ಸಖಿಗಳಿಗೆ ಆನ್‌ಲೈನ್ ಮಾರುಕಟ್ಟೆ ವ್ಯವಸ್ಥೆ ಮತ್ತು ಕಾನೂನು ಸೇವಾ ಪ್ರಾಧಿಕಾರದ ಕುರಿತು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಮಹಿಳಾ ಉದ್ಯಮಿಗಳನ್ನು ಸನ್ಮಾನಿಸಲಾಯಿತು. ಮಹಿಳೆಯರ ಹಕ್ಕುಗಳು, ಸಮಾನತೆ ಮತ್ತು ನ್ಯಾಯದ ಬಗ್ಗೆ ಜಾಗೃತಿ ಮೂಡಿಸುವ ಸಂದೇಶಗಳನ್ನು ನೀಡಲಾಯಿತು.

ಮಹಿಳೆಯರ ಮೇಲೆ ನಡೆಯುವ ಅನ್ಯಾಯ, ಹಿಂಸಾಚಾರ ಹಾಗೂ ಭೇದಭಾವವನ್ನು ತಡೆಯಲು ಸಮಾಜದ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಗಣ್ಯರು ಕರೆ ನೀಡಿದರು. ಸರ್ಕಾರದ ವಿವಿಧ ಯೋಜನೆಗಳನ್ನು ಸದುಪಯೋಗಪಡಿಸಿಕೊಂಡು ಮಹಿಳೆಯರು ಆರ್ಥಿಕ ಹಾಗೂ ಸಾಮಾಜಿಕವಾಗಿ ಸದೃಢರಾಗಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಸ್ವಾಗತ ಭಾಷಣವನ್ನು ನಾಗರಾಜ್ ಹೆಂಬಾಡಿ ಮಾಡಿದರು. ನಿರೂಪಣೆಯನ್ನು ವಿಜಯಲಕ್ಷ್ಮಿ ಎಂ ಭರ್ಮಶೆಟ್ಟಿ ನಡೆಸಿದರು. ಕೊನೆಯಲ್ಲಿ ವಂದನಾರ್ಪಣೆಯನ್ನು ರವಿ ಕುಮಾರ್ ವಿ.ಬಿ ಸಲ್ಲಿಸಿದರು.

ಸಾರಾಂಶ:

ಮಹಿಳೆಯರು ತಮ್ಮ ಪರಿಶ್ರಮ ಮತ್ತು ಆತ್ಮವಿಶ್ವಾಸದ ಮೂಲಕ ಎಲ್ಲಾ ಕ್ಷೇತ್ರಗಳಲ್ಲಿ ಮುನ್ನಡೆಯುತ್ತಿದ್ದು, ಮಹಿಳಾ ಸಬಲೀಕರಣವು ಸಮಗ್ರ ಸಮಾಜದ ಅಭಿವೃದ್ಧಿಗೆ ಪ್ರಮುಖ ಶಕ್ತಿಯಾಗಿದೆ.

# ಹಲ್ಲುಗಳ ಆರೋಗ್ಯಕ್ಕೆ ಸಮರ್ಪಕ ಬ್ರಷಿಂಗ್ ಮುಖ್ಯ: ಡಾ.ರೇಣುಕಾದೇವಿ

■ ಉದಯ ರಶ್ಮಿ ದಿನಪತ್ರಿಕೆ



ಕಲಬುರಗಿ : ಜಿಲ್ಲೆಯ ಯಡ್ರಾಮಿ ಪಟ್ಟಣದ ಬಾಲಕಿಂ-ಯರ ಸರ್ಕಾರಿ ಪ್ರೌಢಶಾಲೆಯಲ್ಲಿ ಸ್ಥಳೀಯ ಸಮುದಾಯ ಆರೋಗ್ಯ ಕೇಂದ್ರದ ವತಿಯಿಂದ ವಿಶ್ವ ಬಾಯಿ ಆರೋಗ್ಯ ದಿನಾಚರಣೆ ಪ್ರಯುಕ್ತ ವಿದ್ಯಾರ್ಥಿನಿಯರಿಗಾಗಿ ಚಿತ್ರಕಲಾ ಸ್ಪರ್ಧೆ ಹಮ್ಮಿಕೊಳ್ಳಲಾಗಿತ್ತು.

ಈ ವೇಳೆ ಆಸ್ಪತ್ರೆಯ ದಂತ ವೈದ್ಯಾಧಿಕಾರಿ ಡಾ.ರೇಣುಕಾದೇವಿ ಅವರು ಮಾತನಾಡಿ, ನಿತ್ಯ ಬೆಳಗ್ಗೆ ಎದ್ದ ಕೂಡಲೆ ಬ್ರಷ್ ಮಾಡುವ ಅಸಮರ್ಪಕ ವಿಧಾನದಿಂದಾಗಿ ಹಲ್ಲುಗಳಲ್ಲಿ ಸವಕಳಿ ಉಂಟಾಗುತ್ತದೆ. ಹಾಗಾಗಿ, ಹಲ್ಲುಗಳನ್ನು ಉಜ್ಜುವ ಕ್ರಮದಲ್ಲಿಯೂ ವೈಜ್ಞಾನಿಕ ಕ್ರಮ ಕೈಗೊಳ್ಳುವುದು ಹೇಗೆ ಎಂಬುದರ ಕುರಿತು ಜಾಗೃತರಾಗಬೇಕೆಂದು ಕಿವಿಮಾತು ಹೇಳಿದರು.

ಹಲ್ಲು ಮತ್ತು ಬಾಯಿ ಆರೋಗ್ಯಕ್ಕೂ ನಮ್ಮ ಆರೋಗ್ಯಕ್ಕೂ ನೇರವಾದ ಸಂಬಂಧವಿದೆ. ಹೀಗಾಗಿ, ಹಲ್ಲು ಮತ್ತು ಬಾಯಿ ಸ್ವಚ್ಛವಾಗಿಟ್ಟುಕೊಳ್ಳುವ ಕುರಿತು ಮಕ್ಕಳು ಎಚ್ಚರಿಕೆ ವಹಿಸಬೇಕೆಂದು ಅವರು ಸಲಹೆ ನೀಡಿದರು.

ಇದೇವೇಳೆ, ಶಾಲೆಯ 134 ವಿದ್ಯಾರ್ಥಿನಿಯರಿಗೆ ದಂತ ತಪಾಸಣೆ ಕೈಗೊಳ್ಳಲಾಯಿತು. ಈ ವೇಳೆ, 45 ವಿದ್ಯಾರ್ಥಿನಿಯರಲ್ಲಿ ದಂತಕುಳಿ (ಡೆಂಟಲ್ ಕೇರಿಸ್), 32 ವಿದ್ಯಾರ್ಥಿನಿಯರಲ್ಲಿ ಹಲ್ಲು ಮೂಳೆ ಉರಿಯೂತ (ಜಿಂಜಿವೈಟಿಸ್), ಎಂಟು ವಿದ್ಯಾರ್ಥಿನಿಯರಲ್ಲಿ ಹಲ್ಲುಗಳ ಅಸಮರ್ಪಕ ಬೆಳವಣಿಗೆ (ಮಾಲೊಕ್ಲೂಷನ್) ಮತ್ತು ಆರು ವಿದ್ಯಾರ್ಥಿನಿಯರಲ್ಲಿ ಫ್ಲೋರೈಡ್ ಸಮಸ್ಯೆಯಿಂದ ಹಲ್ಲುಗಳ ಬಣ್ಣ ಬದಲಾವಣೆ ಸಮಸ್ಯೆ ಪತ್ತೆಯಾಯಿತು. ಈ ಎಲ್ಲ ವಿದ್ಯಾರ್ಥಿನಿಯರಿಗೆ ಯಡ್ರಾಮಿಯ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಉಚಿತವಾಗಿ ಚಿಕಿತ್ಸೆ ನೀಡುವ ಕು-ರಿತು ಭರವಸೆ ನೀಡಲಾಯಿತು.

ಇದೇವೇಳೆ, ಹಲ್ಲುಗಳನ್ನು ಉಜ್ಜುವ ಕ್ರಮದ ಕುರಿತು ವಿದ್ಯಾರ್ಥಿನಿಯರಿಗೆ ತರಬೇತಿ ನೀಡಲಾಯಿತು.

ಶಾಲೆಯ ಮುಖ್ಯೋಪಾಧ್ಯಾಯಿನಿ ಜ್ಯೋತಿ, ಶಿಕ್ಷಕಿಯರಾದ ಸಂಪತಕುಮಾರಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಜೀವ ಸಂಕುಲದ ಉಳಿವಿಗೆ ಉತ್ತಮ ವಾತಾವರಣ ಅಗತ್ಯ

■ ಉದಯ ರಶ್ಮಿ ದಿನಪತ್ರಿಕೆ



ಕಲಬುರಗಿ: ಯಾವುದೇ ಜೀವಿಯು ಜನಿಸಿ, ಬೆಳವಣಿಗೆ ಹೊಂದಿ, ತನ್ನ ಜೀವನವನ್ನು ಸಾಗಿಸಬೇಕಾದರೆ ಪರಿಸರ, ನಿಸರ್ಗ, ಉತ್ತಮ ವಾತಾವರಣ ಅಗತ್ಯವಾಗಿದೆ. ನಿಸರ್ಗದಲ್ಲಿ ಏನಾದರೂ ಏರುಪೇರಾದರೆ ಅದರಿಂದ ಎಲ್ಲಾ ಜೀವರಾಶಿಗಳಿಗೂ ತೊಂದರೆಯಿದೆ. ಇತ್ತೀಚಿನ ದಿನಗಳಲ್ಲಿ ನಿಸರ್ಗದ ಮೇಲೆ ಮಾನವನ ದೌರ್ಜನ್ಯ ಜರುಗುತ್ತಿರುವುದ-ರಿಂದ, ನಿಸರ್ಗದಲ್ಲಿ ಸಾಕಷ್ಟು ಬದಲಾವಣೆಯಾಗಿ ತೊಂದರೆಗಳು ಉಂಟಾಗುತ್ತಿವೆ. ಆದ್ದರಿಂದ ಉತ್ತಮ ವಾತಾವರಣ ಕಾಪಾಡುವುದು ಇಂದಿನ ಜರೂ-ರಿಯಾಗಿದೆ ಎಂದು ಉಪನ್ಯಾಸಕ ಎಚ್.ಬಿ.ಪಾಟೀಲ ಹೇಳಿದರು.

ನಗರದ 'ಜೆ.ಆರ್ ನಗರದ ಸಕ್ಸಸ್ ಕಂಪಯೂಟರ ತರಬೇತಿ ಸಂಸ್ಥೆ'ಯಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಜರುಗಿದ 'ವಿಶ್ವ ವಾತಾವರಣ ದಿನಾಚರಣೆ'ಯ ಕಾರ್ಯಕ್ರಮದಲ್ಲಿ ಅವರು ಮಾತನಾಡುತ್ತಿದ್ದರು.

ಭಾರತವು ನೈಸರ್ಗಿಕ ಸಂಪನ್ಮೂಲ ಮತ್ತು ಮಾನವ ಸಂಪನ್ಮೂಲಗಳಿಂದ ಸಂಪದ್ಭರಿತ ರಾಷ್ಟ್ರವಾಗಿದೆ. ನಮ್ಮದೇಶದಲ್ಲಿ 45000 ಸಸ್ಯ ಪ್ರಬೇಧಗಳಲ್ಲಿ 15000 ಹೂ ಬಿಡುವ ಸಸ್ಯಗಳು, 1676 ಪಾಚಿ, 1940 ಕಲ್ಲು ಹೂಗಳು, 12480 ಅಣಬೆ ಸೇರಿದಂತೆ ಸಾಕಷ್ಟುಸಂಖ್ಯೆಯಲ್ಲಿ ಸಸ್ಯರಾಶಿ ಇದೆ. ಒಟ್ಟು 81000 ಪ್ರಾಣಿ ಪ್ರಬೇಧಗಳಲ್ಲಿ, 372 ಸಸ್ತನಿಗಳು, 1228 ಪಕ್ಷಿ ಸಂಕುಲ, 428 ಸರಿಸೃಪಗಳು, 204 ಉಭಯ ಜೀವಿಗಳು, 2546 ಮೀನು 57525 ಕೀಟಗಳು ಮತ್ತು ಅನೇಕ ಅಕಶೇರಕಗಳನ್ನು ಹೊಂದಿರುವ ಅತ್ಯಂತ ನೈಸರ್ಗಿಕ ಸಂಪದ್ಭರಿತ ರಾಷ್ಟ್ರ ನಮ್ಮದಾಗಿದೆ. ನಮ್ಮ ಸುತ್ತಮುತ್ತಲು ಗಿಡಮರಗಳನ್ನು ನೆಟ್ಟು ಪೋಷಿಸಬೇಕು. ಸಸ್ಯ ಮತ್ತು ಪ್ರಾಣಿ ಸಂಪತ್ತು ನಾಶಮಾಡಬಾರದು. ಪರಿಸರ ರಕ್ಷಣೆ ಅರಿವು ಪ್ರತಿಯೊಬ್ಬರಲ್ಲಿ ಮೂಡಬೇಕು. ಉತ್ತಮವಾದ ನಿಸರ್ಗ ಉಳಿದರೆ ಮಾತ್ರ ನಮ್ಮ ಉಳಿವು ಇದೆ ಎಂಬುದುನ್ನು ನಾವು ಮರೆಯಬಾರದು ಎಂದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷ ಅಸ್ಲಾಂ ಶೇಖ್, ಕರಾವಿಪ ಗ್ರಾಮೀಣ ಘಟಕದ ಮಾಜಿ ಸಂಚಾಲಕ ಶಿವಯೋಗೆಪಾ ಎಸ್.ಬಿರಾದಾರ, ಮುಖಂಡ ಓಂಕಾರ ವಠಾರ ಹಾಗೂ ವಿದ್ಯಾರ್ಥಿಗಳಿದ್ದರು.

ಕಮಲನಗರ::ಪ್ರತಿವರ್ಷ ಯುಗಾದಿ ಹಬ್ಬದ ಅಂಗವಾಗಿ ಔರಾದ್‌ನಿಂದ ಕಮಲನಗರ ಮಾರ್ಗವಾಗಿ ಮಹದೇಶ್ವರ ಬೆಟ್ಟಕ್ಕೆ ನಡೆದುಕೊಂಡು ಹೋಗುವ ಸಂಪ್ರದಾಯಿಕ ಪಾದಯಾತ್ರಿಗಳಿಗೆ ಪಟ್ಟಣದ ಬಸವೇಶ್ವರ ವೃತ್ತದಲ್ಲಿ ಅದ್ದೂರಿ ಸ್ವಾಗತ ಕೋರಿದರು.



# ಕಟ್ಟಡ ಕಾರ್ಮಿಕರ ನಿಧಿ ದುರ್ಬಳಕೆ ತಡೆಗೆ ಮನವಿ



■ ಉದಯ ರಶ್ಮಿ ದಿನಪತ್ರಿಕೆ

ಕಲಬುರಗಿ: 2026-27 ಸಾಲಿನ ರಾಜ್ಯಸರ್ಕಾರದ ಬಜೆನಲ್ಲಿ ಸರ್ಕಾರದ ವಿವಿಧ ಯೋಜನೆಗಳಿಗೆ 27 ಸಾಲಿನ ರಾಜ್ಯ ಸರ್ಕಾರದ ಬಜೆನಲ್ಲಿ ಸರ್ಕಾರದ ವಿವಿಧ ಯೋಜನೆಗಳಿಗೆ ಕಟ್ಟಡಕಾರ್ಮಿಕರ ನಿಧಿಯ ಬಳಕೆಗೆ ತೀವ್ರ ವಿರೋಧ ವ್ಯಕ್ತಪಡಿಸಿ, ತಾವುಗಳು ವಿಧಾನಸಭೆ/ ವಿಧಾನ ಪರಿಷತ್ತನಲ್ಲಿ ಪ್ರಶ್ನಿಸಿ ಸರ್ಕಾರದ ಗಮನ ಸೆಳೆದು ಕಟ್ಟಡಕಾರ್ಮಿಕರ ಪರವಾಗಿಧ್ವನಿ ಎತ್ತಬೇಕೆಂದು ಸಚಿವ ಡಾ.ಶರಣಪ್ರಕಾಶ ಪಾಟೀಲ, ಶಾಸಕರಾದ ಎಂ.ವಾಯ್.ಪಾಟೀಲ, ಅಲ್ಲಮಪ್ರಭು ಪಾಟೀಲ, ಬಸವರಾಜ ಮತ್ತಿಮಡು ಇವರಿಗೆ ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕ ಫೆಡರೇಶನ್ (ರಿ), ಸಿ.ಐ.ಟಿ.ಯು ಸಂಯೋಜಿತ ಸಂಘಟನೆ ವತಿಯಿಂದ ಮನವಿ ಸಲ್ಲಿಸಿಲಾಯಿತು.

ಈ ಸಂದರ್ಭದಲ್ಲಿ ಕಲಬುರ್ಗಿ ಜಿಲ್ಲಾ ಸಮಿತಿ ಸಂಚಾಲಕ ಶ್ರೀಮಂತ ಬಿರಾದರ್, ಸಹ ಸಂಚಾಲಕ ನಾಗಪ್ಪ ರಾಯಚೂರಕರ, ಖಜಂಚಿ ಬಾಬು ಹೂವಿನಹಳ್ಳಿ, ಯಶ್ವಂತ್ ಪಾಟೀಲ್, ಪ್ರಕಾಶ್ ಕುಸಾಳೆ, ಮಹಮ್ಮದ್ ಇಸ್ಮಾಯಿಲ್, ಅಶೋಕ್ ಬಾಗಡೆ, ಅಂಬರಾಯ, ಹನುಮಂತ, ಶಾಮರಾವ್, ಭೀಮರಾವ್, ಮಹಾಂತಪ, ಲಕ್ಷಣ ನಂದೂರಕರ್ ಸೇರಿದಂತೆ ತಾಲೂಕ್ ಪದಾಧಿಕಾರಿಗಳು ಇದ್ದರು.

# ನ್ಯಾಯಮೂರ್ತಿ ನಾಗಮೋಹನದಾಸ ಆಯೋಗ ವರದಿ ತಿರಸ್ಕರಿಸಿ ; ದತ್ತಾತ್ರೇಯ ಕುಡಕಿ ಆಗ್ರಹ

■ ಉದಯ ರಶ್ಮಿ ದಿನಪತ್ರಿಕೆ



ಕಲಬುರಗಿ : ನ್ಯಾಯಮೂರ್ತಿ ನಾಗಮೋಹನದಾಸ್ ರವರ ಅಧ್ಯಕ್ಷತೆಯಲ್ಲಿ ಒಳಮೀಸಲಾತಿ ಏಕ ಸದಸ್ಯ ವಿಚಾರಣಾ ಆಯೋಗವನ್ನು ನೇಮಕ ಮಾಡಿ ಸಮೀಕ್ಷೆ ನಡೆಸಿ ವರದಿಯನ್ನು ಪರಿಶಿಷ್ಟ ಜಾತಿ ಬಲಗೈ ಸಮುದಾಯಕ್ಕೆ ಮರಣ ಶಾಸನವಾಗಿರುವುದರಿಂದ ವರದಿ ತಿರಸ್ಕಾರ ಮಾಡಬೇಕೆಂದು ಅಖಿಲ ಕರ್ನಾಟಕ ದಲಿತ ಸೇನೆಯ ರಾಜ್ಯಾಧ್ಯಕ್ಷ ದತ್ತಾತ್ರೇಯ ಕುಡಕಿ ಆಗ್ರಹಿಸಿದರು.


ಸುದ್ದಿಗಾರರೊಂದಿಗೆ ಮಾತನಾಡಿ, ಭಾರತದ ಸರ್ವೋಚ ನ್ಯಾಯಾಲಯವು ದಿ. 01.08.2024 ರಂದು ಒಳಮೀಸಲಾತಿಯನ್ನು ನೀಡಲು ಆಯಾ ರಾಜ್ಯಗಳಿಗೆ ಅಧಿಕಾರವಿದೆ ಎಂದು ತೀರ್ಪು ನೀಡಿದ್ದು, ಪರಿಶಿಷ್ಟ ಜಾತಿಯಲ್ಲಿ ಬರುವ ಎಲ್ಲಾ ಉಪ ಜಾತಿಗಳಿಗೂ ಸೂಕ್ತ ಪ್ರಾತಿನಿಧ್ಯ ಸಿಗದ ಬಗ್ಗೆ ಖಚಿತವಾದ ಅಂಕಿ-ಅಂಶಗಳ ವರದಿ ಆಧಾರದ ಮೇಲೆ ಹಾಗೂ ಅಗತ್ಯವಾದ ಪೂರ್ಣ ಅಂಕಿ ಅಂಶಗಳನ್ನು ಪಡೆದು ಒಳಮೀಸಲಾತಿ ನೀಡಬಹುದೆಂದು ಸೂಚನೆ ನೀಡಿದೆ ಎಂದು ತಿಳಿಸಿದರು.

ರಾಜ್ಯ ಸರ್ಕಾರವು ಶೇಕಡ 17+7ರ ಮೀಸಲಾತಿ ಪ್ರಮಾಣಕ್ಕೆ ರಾಜ್ಯ ಉಚ್ಚ ನ್ಯಾಯಾಲಯವು ತಡೆಯಾಜ್ಞೆ ನೀಡಿದ್ದು, ಸಾಮಾನ್ಯ ವರ್ಗದವರು ನೇಮಕಾತಿ ಪ್ರಕ್ರಿಯೆಯನ್ನು ಕೈಗೊಳ್ಳಬೇಕೆಂದು ಹೋರಾಟ ರೂಪಿಸಿದ ಹಿನ್ನೆಲೆಯಲ್ಲಿ ದಿನಾಂಕ: 27.02.2026ರಂದು ಶೇಕಡ 15+3ರ ಪ್ರಮಾಣದಲ್ಲಿ ಒಳಮೀಸಲಾತಿ ರಹಿತ" ನೇಮಕ ಮಾಡಲು ಆದೇಶ ಹೊರಡಿಸಿ ಗೆಜೆಟ್‌ನಲ್ಲಿ ಪಕಟಿಸಿರುತ್ತದೆ. ಆದರೆ, 101 ಜಾತಿಗಳಲ್ಲಿ ಒಂದು ಸಮುದಾಯವು ಶೇಕಡ 15+3 ಮೀಸಲಾತಿಯಲ್ಲಿ ಒಳಮೀಸಲಾತಿಯನ್ನು ಅಳವಡಿಸಬೇಕೆಂದು ಹೋರಾಟ ಮಾಡುತ್ತಿರುವ ಹಿನ್ನೆಲೆಯಲ್ಲಿ ದಿ. 27 ರಂದು ರಾಜ್ಯ ಸಚಿವ ಸಂಪುಟದ ವಿಶೇಷ ಸಭೆಯನ್ನು ಏರ್ಪಡಿಸಲಾಗಿದ್ದು, ಸದರಿ ಸಭೆಯಲ್ಲಿ ಶೇಕಡ 15+3ರ ಮೀಸಲಾತಿಯಲ್ಲಿ ಒಳಮೀಸಲಾತಿಯನ್ನು ಅಳವಡಿಸಬಾರದೆಂದು ತಪ್ಪಿದ್ದಲ್ಲಿ ಮುಂದೆ ಆಗುವ ಎಲ್ಲಾ ಅನಾಹುತಗಳಿಗೆ ರಾಜ್ಯ ಸರ್ಕಾರವೇ ಜವಾಬ್ದಾರಿ.

ಕರ್ನಾಟಕ ರಾಜ್ಯ ಬಲಗೈ ಜಾತಿಗಳ ಒಕ್ಕೂಟವು ಸರ್ಕಾರಕ್ಕೆ ಈ ಮೂಲಕ ಸ್ಪಷ್ಟವಾಗಿ ಎಚ್ಚರಿಸುವ ಈ ಹೋರಾಟಕ್ಕೆ 25.03.2026ರಂದು ಎಂಬುದು ರಹಿತ ಹಳೆ ಮೀಸಲಾತಿಯ ಜಾರಿಗಾಗಿ ಒತ್ತಾಯಿಸಿಬೃಹತ್ ಪ್ರತಿಭಟನಾ ಸಮಾವೇಶಕ್ಕೆ ಅಖಿಲ ಕರ್ನಾಟಕ ದಲಿತ ಸೇನೆಯು ಬೆಂಬಲ ವ್ಯಕ್ತಪಡಿಸಿ ಸಂಘಟನೆಯ ಸುಮಾರು 500 ಕಾರ್ಯಕರ್ತರು ಬೆಂಗಳೂರಿನ ಫ್ರೀಡಂ ಪಾರ್ಕನಲ್ಲಿ ನಡೆಯುತ್ತಿರುವ ಹೋರಾಟದಲ್ಲಿ ಭಾಗವಗಹಿಸಲಿದ್ದರೆ ಎಂದು ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

# ಇಂದಿನಿಂದ ಕಡಣಿ ಭೋಗೇಶ್ವರ ಜಾತ್ರೆ

■ ಉದಯರಶ್ಮಿ ದಿನಪತ್ರಿಕೆ



ಆಲಮೇಲ: ತಾಲ್ಲೂಕಿನ ಕಡಣಿ ಗ್ರಾಮದ ಭೋಗಲಿಂಗೇಶ್ವರ ಜಾತ್ರೆಯು ಮಾ.25ರಿಂದ 27ರ ವರೆಗೆ ನಡೆಯಲಿದೆ ಎಂದು ಜಾತ್ರಾ ಕಮೀಟಿ ತಿಳಿಸಿದೆ.

12ನೇ ಶತಮಾನದ ವಚನಕಾರ ಕೆಂಭಾವಿ ಭೋಗಣ್ಣ ಅಂತಿಮ ದಿನಗಳನ್ನು ಕಡಣಿ ಗ್ರಾಮದ ಭೀಮಾತಟದಲ್ಲಿ ಕಳೆದನೆಂದು ಹೇಳಲಾಗಿದೆ. ಅಲ್ಲಿ ವಿಶಾಲವಾದ ಭವ್ಯ ದೇಗುಲವಿದ್ದು ಪ್ರತಿವರ್ಷ ಯುಗಾದಿ ಅಮಾವಾಸ್ಯೆಯ 7ನೇ ದಿನದಿಂದ ಉತ್ಸವ ನಡೆಯುತ್ತದೆ.

ಮಾರ್ಚ 4ರಿಂದ ಆರಂಭವಾದ ಶರಣಬಸವೇಶ್ವರ ಪುರಾಣವು ಮಹಾಮಂಗಲಗೊಳ್ಳುವದರಿಂದ ಜಾತ್ರೆಯು ನಡೆಯುತ್ತದೆ ಎಂದು ಕಮೀಟಿಯ ಸಂತೋಷ ಕ್ಷತ್ರಿ ತಿಳಿಸಿದ್ದಾರೆ.

ಕುಂಭಾಭಿಷೇಕ: ಮಾರ್ಚ 25ರಂದು ಬೆಳಿಗ್ಗೆ ಸಹಸ್ರಾರು ಸುಮಂಗಲೆಯರಿಂದ ಕುಂಭಾಭಿಷೇಕ ನಡೆಯಲಿದೆ, ನಂತರ ಲಿಂಗಕ್ಕೆ ಬಿಲ್ವಾರ್ಚನೆ, ಧಾರ್ಮಿಕ ಆಚರಣೆಗಳು ನಡೆಯುತ್ತವೆ.

ಪಲ್ಲಕ್ಕಿ ಉತ್ಸವ

26ರಂದು ರಾತ್ರಿ 8ಕ್ಕೆ ಭೋಗೇಶ್ವರ ಮೂರ್ತಿಯನ್ನು ಪಲ್ಲಕ್ಕಿಯಲ್ಲಿ ಇರಿಸಿ ಗ್ರಾಮದ ಪ್ರಮುಖ ಬೀದಿಗಳಲ್ಲಿ ಭವ್ಯ ಮೆರವಣಿಗೆ ನಡೆಯುತ್ತದೆ, ವಿವಿಧ ಜಾನಪದ ಕಲಾ ತಂಡಗಳು ಪಾಲ್ಗೊಳ್ಳಲಿದ್ದು, ಪುರವಂತರು ಧಾರ್ಮಿಕ ಕೈಂಕರ್ಯದಲ್ಲಿ ಸೇವೆ ಸಲ್ಲಿಸುವರು. ಸುತ್ತಲಿನ ಹಳ್ಳಿಗಳ ಜನರು ಭಾಗವಹಿಸುವರು.

ರಥೋತ್ಸವ ಮಾರ್ಚ್ 27ರಂದು ಸಂಜೆ ರಥೋತ್ಸವ ಜರುಗಲಿದ್ದು, ಅಂದು ಮಧ್ಯಾಹ್ನ ಸಾಮೂಹಿಕ ವಿವಾಹ ಹಾಗೂ ಧಾರ್ಮಿಕ ಸಭೆಯು ನಾಡಿನ ವಿವಿಧ ಸ್ವಾಮೀಜಿಗಳ ಸಾನಿಧ್ಯದಲ್ಲಿ ಜರಗಲಿದೆ. ಅಂದು ಸಂಜೆ ಮಹಾರಾಷ್ಟ್ರ ಕರ್ನಾಟಕ ಜಂಗೀ ಪೈಲ್ವಾನ್ ರಿಂದ ಕುಸ್ತಿಗಳು ನಡೆಯುತ್ತವೆ

ದನಗಳ ಜಾತ್ರೆ ಪ್ರತಿವರ್ಷದಂತೆ ಈ ವರ್ಷವು ದನಗಳ ಜಾತ್ರೆ ಆಯೋಜಿಸಲಾಗಿದ್ದು, ರಾಸುಗಳಿಗೆ ಬಹುಮಾನ ನೀಡಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ



# ಬಳ್ಳೊಳ್ಳಿಯಲ್ಲಿ ಅದ್ದೂರಿಯಾಗಿ ನಡೆದ ಶ್ರೀ ವೀರಭದ್ರೇಶ್ವರ ಜಾತ್ರೆ

■ ಉದಯರಶ್ಮಿ ದಿನಪತ್ರಿಕೆ

ಚಡಚಣ: ಪ್ರತಿ ವರ್ಷದಂತೆ ಈ ವರ್ಷವು ಕೂಡಾ ಬಳ್ಳೊಳ್ಳಿ ಗ್ರಾಮದ ಗ್ರಾಮ ದೇವರು ಶ್ರೀ ವೀರಬದ್ರೇಶ್ವರ ದೇವರ ಜಾತ್ರಾ ಮಹೊತ್ಸವ ಆಚರಣೆ ಅದ್ದೂರಿಯಾಗಿ ನಡೆಯಿತು, ಸೋಮವಾರ ದಿವಸ ಜಂಗಮ ವಟುಗಳಿಗೆ ಹಿರಿಯರ ವಾಡಿಕೆಯಂತೆ ಬಾಳಿಕಾಯಿ, ಚಪಾತಿ, ಹುಗ್ಗಿ ವಿಶೇಷ ಭೋಜನ ಉಣ ಬಡಿಸಿ ನಂತರ ಗ್ರಾಮದ ಭಕ್ತರು ಪ್ರಸಾದ ಸೇವಿಸಿದರು, ನಂತರ ಗೀಗೀ ಪದಗಳು ಜರುಗಿದವು, ಮಂಗಳವಾರ ಬೆಳಿಗಿನ ಜಾವದಲ್ಲಿ ಭಕ್ತಾದಿಗಳಿಂದ ಧೀರ್ಘದಂಡವತ, ಜವಳ ಸೇವೆ, ನಂತರ ವೇಷಧಾರಿ ಪುರವಂತರಿಂದ ಶಸ್ತ್ರಾಸ್ತ್ರಗಳಿಂದ ನೃತ್ಯ, ನಂದಿ ಧ್ವಜಗಳನ್ನು ಹೊತ್ತು ಭಕ್ತರ ಭವ್ಯ ಮೇರವಣಿಗೆ, ಮದ್ಯಾಹ್ನ ಸರಿಯಾಗಿ

ಸುಡು ಬಿಸಿಲಿನಲ್ಲಿ ವೀರಬದ್ರೇಶ್ವರ ದೇವರ ಪೂಜಾರಿ ಮೋನಪ್ಪ ಬಡಿಗೇರ ಇವರಿಂದ ಅಗ್ನಿ ಪ್ರವೇಶ, ನಂತರ ಪಲ್ಲಕ್ಕಿ, ನಂದಿ ಧ್ವಜಗಳ ಮೆರವಣಿಗೆ ನಡೆಯಿತು. ನೂರಾರು ಭಕ್ತರು ಅಗ್ನಿ ಪ್ರವೇಶ ಮಾಡಿ ಪುನಿತರಾದರು. ಈ ಸಂದರ್ಭದಲ್ಲಿ ಮಾಜಿ ಸಚಿವ ಅಪ್ಪಾಸಾಹೇಬ ಪಟ್ಟಣಶೆಟ್ಟಿ, ಇಂಡಿ ಶಾಸಕ ಯಶವಂತರಾಗೌಡ ಪಾಟೀಲ, ಭೀಮಾಶಂಕರ ಸಕ್ಕರೆ ಕಾರ್ಖಾನೆಯ ಉಪಾಧ್ಯಕ್ಷ ಮಲ್ಲನಗೌಡ ಪಾಟೀಲ, ಝಳಕಿ ಠಾಣಾಧಿಕಾರಿ ಮಂಜುನಾಥ ತಿರಕನ್ನವರ, ಈರಣ್ಣ ವಾಲಿ, ಕಾಮಣ್ಣಗೌಡ ಬಿರಾದಾರ, ಅಶೋಕ ತೋಟದಾರ, ಸಿದ್ದಾರಾಮ ಶಿರಶ್ಯಾಡ, ಸದಾಶಿವ ರೇವತಗಾಂವ, ರೇವಣಸಿದ್ದ ಶಿರಶ್ಯಾಡ, ವಿನೋದ ಶಿರಶ್ಯಾಡ, ಭೀಮಾಶಂಕರ ವಾಲಿಕಾರ, ರಾಘವೇಂದ್ರ ಕಾಪಸೆ, ಸಣ್ಣಪ್ಪ ತಳವಾರ, ಹರೀಶ ಶೆಟ್ಟಿ, ಪ್ರಕಾಶ ಬಿರಾದಾರ, ಹಾಗೂ ಪೊಲಿಸ ಸಿಬ್ಬಂದಿ ಸೋಮು ಶಿವೂರ, ಭಿಮಾಶಂಕರ ದೇವರ , ಗ್ರಾಮಸ್ಥರು ಉಪಸ್ಥಿತರಿದ್ದರು.



# ಮಹಿಳೆ ಅಬಲೆಯಲ್ಲ ಸಬಲೆ :ಪ್ರತಿಮಾ ಪಾಟೀಲ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಮಹಿಳೆ ಅಬಲೆಯಲ್ಲ ಸಬಲೆ, ಅವಳಿಗೆ ಸಮಾಜದಲ್ಲಿ ಪುರುಷರಷ್ಟೆ ಸರಿಸಮಾನವಾದ ಅವಕಾಶಗಳು ಮಹಿಳೆಗೆ ದೊರೆಯಬೇಕು ಎಂದು ಮಹಿಳಾ ವಿಶ್ವವಿಧ್ಯಾಲಯದ ಸಹಾಯಕ ಪ್ರಾಧ್ಯಾಪಕಿ ಪ್ರತಿಮಾ ಪಾಟೀಲ ಹೇಳಿದರು.

ನಗರದ ನವರಸಪುರ ಬಡಾವಣೆಯ ಸಿದ್ಧಾರ್ಥ ಕಾಲೋನಿಯ ಸಿದ್ದಿ ವಿನಾಯಕ ದೇವಸ್ಥಾನದಲ್ಲಿ ಸೋಮವಾರ ಸಂಜೆ ನಡೆದ ಮಹಿಳಾ ದಿನಾಚರಣೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.ಲಿಂಗ ತಾರತಮ್ಯ ಮಾಡದೆ ಅ ಮಹಿಳೆಯರಿಗೆ ಗೌರವ ಸಿಗಬೇಕು. ಮಹಿಳೆಯರಿಗೆ ಇರುವ ಹಕ್ಕುಗಳ ಕುರಿತು ಜಾಗ್ರತಿ ಮೂಡಿಸಬೇಕು. ಮಹಿಳಾ ಹಕ್ಕುಗಳು ಮತ್ತು ಹಿಂಸಾಚಾರದ ವಿರುದ್ಧದ ಹೋರಾಟವನ್ನು ಬಲಪಡಿಸುವ ಅರಿವು ಮೂಡಿಸಬೇಕು ಎಂದರು. ಹಾಸ್ಟೆಲ್ ವಾರ್ಡನ್ ಗೀತಾ ನಾಲತವಾಡ ಮಾತನಾಡಿ ಮಹಿಳಾ ಸಬಲೀಕರಣ, ಲಿಂಗ ಸಮಾನತೆ, ತಾರತಮ್ಯದ ನಿರ್ಮೂಲನೆ ಮತ್ತು ಮಹಿಳೆಯರ ಹಕ್ಕುಗಳಿಗಾಗಿ ಧ್ವನಿ ಎತ್ತುವ ಕಾರ್ಯವಾಗಬೇಕು ಎಂದರು. ಭರತನಾಟ್ಯ ಕಲೆಯಲ್ಲಿ ವಿಶೇಷ ಸಾಧನೆ ಮಾಡಿ ಬಹುಮಾನ ಪಡೆದ ಸಾಧನಾ ಬಸವರಾಜ ಕೊಟ್ಯಾಳ ಬಾಲಕಿಗೆ ಸನ್ಮಾನಿಸಲಾಯಿತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಮತಾ ನಾಯಕ ವಹಿಸಿದ್ದರು. ಕರುನಾ ಕುಲಕರ್ಣಿ , ಸುಮಂಗಲಾ ದೊಡಮನಿ, ಕಲೋನಿಯ ಎಲ್ಲ ಮಹಿಳೆಯರು ಭಾಗವಹಿಸಿದ್ದರು.

ಪ್ರಾರ್ಥನೆಯನ್ನು ಶಿಲ್ಪಾ ನಡಗಡ್ಡಿ, ಸ್ವಾಗತವನ್ನು ಪದ್ಮಾ ಕಟ್ಟಿಮನಿ, ನಿರೂಪಣೆ ಶಶಿಕಲಾ ಸಿದರೆಡ್ಡಿ, ವಂದನಾರ್ಪನೆಯನ್ನು ಅರುನಾ ಸಿನ್ನೂರ ನೆರವೇರಿಸಿದರು.

# ನೂತನ ಕಲಾ ಮಹಾವಿದ್ಯಾಲಯದ ವಿದ್ಯಾರ್ಥಿಗಳ ಸಾಧನೆ

■ ಉದಯರಶ್ಮಿ ದಿನಪತ್ರಿಕೆ



ತಿಕೋಟಾ: ತಾಲೂಕಿನ ಬಿ.ಎಲ್. ಡಿ. ಇ. ಸಂಸ್ಥೆಯ ನೂತನ ಕಲಾ ಹಾಗೂ ವಾಣಿಜ್ಯ ಮಹಾವಿದ್ಯಾಲಯದ ಕಂಪ್ಯೂಟರ್ ಸೈನ್ಸ್ ವಿಭಾಗದ ಸೈಬರ್ ಸೆಕ್ಯೂರಿಟಿ ವಿಷಯದ 2025–26 ನೇ ಸಾಲಿನ ಪರೀಕ್ಷೆಯಲ್ಲಿ ಮುಕ್ತೇಶ ವಾಲಿಕಾರ, ಪವನಕುಮಾರ ಬೋಸ್ಲೆ, ಪ್ರಮೋದ ಹೂಗಾರ, ವೀರೇಶ ಹಿರೇಮಠ, ಸಂಗಮೇಶ ವಳಸಂಗ, ಆದರ್ಶ ಗಗನಮಾಲಿ, ಅಕ್ಷತಾ ಅವಟಿ ವಿದ್ಯಾರ್ಥಿಗಳು ನೂರಕ್ಕೆ ನೂರರಷ್ಟು ಅಂಕಗಳನ್ನು ಪಡೆದು ಸಾಧನೆಗೈಯುವುದರ ಮೂಲಕ ವಿಭಾಗಕ್ಕೆ ಹಾಗೂ ಕಾಲೇಜಿಗೆ ಕೀರ್ತಿ ತಂದಿದ್ದಾರೆ.

ಶೇ.95ಕ್ಕೂಹೆಚ್ಚುಅಂಕಗಳನ್ನು ಪಡೆದ ಅಪ್ಸನಾ ಬೇವನೂರು, ಸುಮಿತ ಹಿರೇ ನಾಯಕ, ಐಶ್ವರ್ಯ ಅವಟಿ, ಗುರುಪ್ರಸಾದ ಮಠಪತಿ, ಐಶ್ವರ್ಯ ಜೇವೂರೆ, ಸುಮನ ವನರಾಶಿ, ಸುನೀತಾ ವನರಾಶಿ, ರೋಹಿಣಿ ಜಾಧವ, ಮಯೂರಿ ಜೇವೂರೆ, ಅಬ್ದುಲ್ ಬಾಗವಾನ್ ವಿದ್ಯಾರ್ಥಿಗಳ ಈ ಸಾಧನೆಗೆ ಕಾಲೇಜಿನ ಪ್ರಾಂಶುಪಾಲ ಪ್ರೊ.ಪಿ.ಎಸ್.ತೋಳನೂರ, ಸೈಬರ್ ಸೆಕ್ಯೂರಿಟಿ ವಿಷಯ ಉಪನ್ಯಾಸಕ ದೇವರಾಜ ಪಾಟೀಲ ಹಾಗೂ ಕಾಲೇಜಿನ ಸಿಬ್ಬಂದಿ ವರ್ಗ ಹರ್ಷ ವ್ಯಕ್ತಪಡಿಸಿದ್ದಾರೆ.

## ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶ ಸುಶಾಂತ ಚೌಗಲೆ ಸಲಹೆ

# ಪ್ರತಿ ಗ್ರಾಹಕ ತನ್ನ ಹಕ್ಕುಗಳನ್ನು ಅರಿತುಕೊಳ್ಳುವುದು ಮುಖ್ಯ

■ ಉದಯರಶ್ಮಿ ದಿನಪತ್ರಿಕೆ



ಜಮಖಂಡಿ: ವಿಶ್ವ ಗ್ರಾಹಕರ ದಿನಾಚರಣೆಯನ್ನು ರಾಷ್ಟೀಯ ಹಾಗೂ ಅಂತರಾಷ್ಟೀಯ ಮಟ್ಟದಲ್ಲಿಯೂ ಆಚರಿಸಲಾಗುತ್ತದೆ ಎಂದು ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶ ಸುಶಾಂತ ಚೌಗಲೆ ಹೇಳಿದರು.

ನಗರದ ತಾಲೂಕು ಆಡಳಿತ ಸೌಧದ ಸಭಾಭವನದಲ್ಲಿ ಆಯೋಜಿಸಿದ್ದ ವಿಶ್ವ ಗ್ರಾಹಕರ ದಿನಾಚರಣೆ ಹಾಗೂ ಕಾನೂನು ಅರಿವು ನೆರವು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಪ್ರತಿಯೊಬ್ಬ ಗ್ರಾಹಕನು ತನ್ನ ಹಕ್ಕುಗಳನ್ನು ಅರಿತುಕೊಳ್ಳುವುದು ಅತ್ಯಂತ ಮುಖ್ಯವಾಗಿದೆ ಎಂದರು. ವ್ಯಾಪಾರ–ವ್ಯವಹಾರಗಳಲ್ಲಿ ಗ್ರಾಹಕರಿಗೆ ಅನ್ಯಾಯವಾಗದಂತೆ ಕಾಯ್ದೆ–ಕಾನೂನುಗಳು ಅವರ ಹಕ್ಕುಗಳನ್ನು ರಕ್ಷಿಸುತ್ತವೆ ಎಂದು ತಿಳಿಸಿದರು.

ಪ್ರತಿಯೊಬ್ಬ ಗ್ರಾಹಕರಿಗೂ ಸಮಾನ ಹಕ್ಕುಗಳಿದ್ದು, ಸರಿಯಾದ ಬೆಲೆಯಲ್ಲಿ ಗುಣಮಟ್ಟದ ವಸ್ತುಗಳು ದೊರಕಬೇಕು ಎಂಬ ಉದ್ದೇಶದಿಂದ ಸರ್ಕಾರ ಹಾಗೂ ಕಾನೂನು ಸೇವಾ ಪ್ರಾಧಿಕಾರವು ವಿವಿಧ ಮಟ್ಟಗಳಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸುತ್ತಿದೆ ಎಂದು ಹೇಳಿದರು.

"ನಾವೆಲ್ಲರೂ ಗ್ರಾಹಕರೇ. ಒಂದು ಸಣ್ಣವಸ್ತು ಖರೀದಿಸಿದರೂ ನಾವು ಗ್ರಾಹಕರಾಗುತ್ತೇವೆ. ಆದ್ದರಿಂದ ಎಚ್ಚರಿಕೆಯಿಂದಿದ್ದು, ಸಂಬಂಧಿತ ಕಾಯ್ದೆಗಳ ಬಗ್ಗೆ ತಿಳಿದುಕೊಳ್ಳಬೇಕು" ಎಂದು ಅವರು ಸಲಹೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ತಹಶೀಲ್ದಾರ ಅನೀಲ ಬಡಗೇರ ಮಾತನಾಡಿ, ಕಡಿಮೆ ಗುಣಮಟ್ಟದ ವಸ್ತುಗಳು ಹಾಗೂ ಸೇವೆಗಳ ಮೂಲಕ ಗ್ರಾಹಕರು ಅನ್ಯಾಯಕ್ಕೆ ಒಳಗಾಗುವ ಸಾಧ್ಯತೆ ಇದೆ. ಇಂತಹ ಸಂದರ್ಭಗಳಲ್ಲಿ ಕಾನೂನಿನಡಿ ನ್ಯಾಯ ಪಡೆಯುವ ಮಾರ್ಗಗಳ ಬಗ್ಗೆ ಅರಿವು ಅಗತ್ಯ ಎಂದು ಹೇಳಿದರು.

ವಸ್ತುಗಳನ್ನು ಖರೀದಿಸುವಾಗ ಅವುಗಳ ತಯಾರಿಕಾ ದಿನಾಂಕ, ಅವಧಿ (ಎಕ್ಸೈರಿ ಡೇಟ್), ತೂಕ ಹಾಗೂ ಗುಣಮಟ್ಟವನ್ನು ಪರಿಶೀಲಿಸಬೇಕು.

ನ್ಯಾಯವಾದಿಗಳಾದ ಎಸ್.ಬಿ. ಕಾಳೆ ಹಾಗೂ ಲಕ್ಷ್ಮೀ ಸವದಿ ಗ್ರಾಹಕರ ಹಕ್ಕುಗಳು ಮತ್ತು ಪರಿಹಾರ ಕ್ರಮಗಳ ಕುರಿತು ಉಪನ್ಯಾಸ ನೀಡಿದರು. ಕಸ್ತೂರಿ ಜೈನಾಪುರ ಸ್ವಾಗತಿಸಿ ವಂದಿಸಿದರು. ಕಾರ್ಯಕ್ರಮದಲ್ಲಿ ತಾಲೂಕು ಕಾನೂನು ಸೇವಾ ಸಮಿತಿ ಸದಸ್ಯ ಕಾರ್ಯದರ್ಶಿ ಹಾಗೂ ಹೆಚ್ಚುವರಿ ಸಿವಿಲ್ ನ್ಯಾಯಾಧೀಶೆ ಶ್ರೀದೇವಿ,

ಆಹಾರ ಸಿರಸ್ತೆದಾರ ಬಸವರಾಜ ತಾಳಿಕೋಟಿ, ಆಹಾರ ನಿರೀಕ್ಷಕ ಆನಂದ ರಾಠೋಡ, ಸುರೇಶ ಕುರಿ, ಸೋಮು ಕಿಸ್ತೆನ್ನವರ ನ್ಯಾಯಾಲಯದ ಸಿಬ್ಬಂದಿ ಮಂಜುನಾಥ ಡಿ. ಮಹೇಶ್ ಪಾಟೀಲ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ರೈತರ ಹೊಲದಲ್ಲಿ ಅನಾಹುತಕ್ಕೆ ಕಾದಿರುವ ವಾಲಿದ ವಿದ್ಯುತ್ ಕಂಬ

■ ಉದಯರಶ್ಮಿ ದಿನಪತ್ರಿಕೆ

ಇಂಡಿ: ತಾಲೂಕಿನ ಶಿರಗೂರ ಗ್ರಾಮದ ರೈತರ ಜಮೀನಿನಲ್ಲಿ ಹಲವು ವರ್ಷಗಳಿಂದ ವಿದ್ಯುತ್ ಕಂಬ ಜೋತು ಬಿದ್ದಿರುವದು ಆತಂಕಕ್ಕೆ ಕಾರಣವಾಗಿದೆ.

ಈ ಕುರಿತು ಅನೇಕ ಬಾರಿ ಇಲಾಖೆಗೆ ಮನವಿ ಸಲ್ಲಿಸಿದರೂ ಯಾವದೇ ಕ್ರಮ ಕೈಕೊಳ್ಳದಿರುವದು ರೈತರ ಅಕ್ರೋಶಕ್ಕೆ ಕಾರಣವಾಗಿದೆ.

ಪ್ರತಿಯೊಬ್ಬರ ಜಮೀನಿನಲ್ಲಿ ಕಂಬ ಎರಡು ಕಡೆಯಿಂದ ವಾಲಿ ನಿಂತಿವೆ. ಮೇಲಿನ ವಿದ್ಯುತ್ ತಂತಿಗಳು ಕೂಡ ಅಸ್ಥಿರವಾಗಿದ್ದು ಅಪಾಯವನ್ನು ಮತ್ತಷ್ಟು ಹೆಚ್ಚಿಸುವಂತೆ ಮಾಡಿದೆ. ಈ ಪರಿಸ್ಥಿತಿಯಲ್ಲಿ ರೈತರು ತಮ್ಮ ದಿನ ನಿತ್ಯದ ಕೃಷಿ ಕಾರ್ಯ ಚಟುವಟಿಕೆಗಳನ್ನು ಭಯ ಭಿತಿಯಿಂದಲೇ ಮಾಡಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ.

ಈ ವಿದ್ಯುತ ಕಂಬಗಳು ಮಳೆ ಗಾಳಿ ಬಿಸಿದಾಗ ಇನ್ನಷ್ಟು



ಜಾರುವ ಪರಿಸ್ಥಿತಿಯಲ್ಲಿದ್ದು ಯಾವದೇ ಪರಿಸ್ಥಿತಿಯಲ್ಲಿ ನೆಲಕ್ಕುರುಳುವ ಸಾದ್ಯತೆ ಹೆಚ್ಚಾಗಿದೆ. ಗಾಳಿಯ ರಭಸಕ್ಕೆ ವಿದ್ಯುತ್ ತಂತಿಗಳು ಪರಸ್ಪರ ಒಂದಕ್ಕೊಂದು ತಗುಲಿ ಬೆಂಕಿಯ ಕಿಡಿಗಳು ಹಾರುತ್ತಿದ್ದು ಬೆಳೆಗಳಿಗೆ ಅಪಾಯ ಎದುರಾಗಿದೆ. ಅಧಿಕಾರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿಲ್ಲ.

> ರೈತರ ಹೊಲದಲ್ಲಿ ಅಷ್ಟೆ ಅಲ್ಲ, ರಸ್ತೆ ಮೇಲಿನ ತಂತಿಗಳು ಜೋತು ಬಿದ್ದಿವೆ. ಅನೇಕ ಬಾರಿ ವಿದ್ಯುತ್ ಇಲಾಖೆಗೆ ಮನವಿ ಮಾಡಿದ್ದೇವೆ. ಯಾವದೇ ಕ್ರಮ ಕೈಕೊಂಡಿಲ್ಲ."
>
> ■ ಅರ್ಜುನ ಪೂಜಾರಿ
> ಸ್ಥಳೀಯ ರೈತ

> ಸಮಸ್ಯೆ ನನ್ನ ಗಮನಕ್ಕೆ ಬಂದಿದೆ. ಒಂದು ವಾರದಲ್ಲಿ ಸೂಕ್ತ ಕ್ರಮ ಕೈಕೊಳ್ಳುತ್ತೇವೆ."
>
> ■ ಸಂಗಮನಾಥ ಮೆಡೆಗಾರ
> ಎಇಇ ಹೆಸ್ಕಾಂ, ಇಂಡಿ

# ಸಂಪೂರ್ಣ ಒಳಮೀಸಲಾತಿ ಜಾರಿಗೆ ರಕ್ತ ಕರಪತ್ರ ಚಳುವಳಿ!

■ ಉದಯರಶ್ಮಿ ದಿನಪತ್ರಿಕೆ



ಹೆಚ್ ಡಿ ಕೋಟೆ: ಸಂಪೂರ್ಣ ಒಳಮೀಸಲಾತಿ ಜಾರಿಗಾಗಿ ಮಾದಿಗ ಸಮುದಾಯ ಮಾಡು ಇಲ್ಲವೇ ಮಡಿ ಹೋರಾಟಕ್ಕೆ ಮುಂದಾಗಿದೆ. ಮಾರ್ಚ್ 27 ರಂದು ಸರ್ಕಾರಿ ಹುದ್ದೆಗಳ ನೇಮಕಾತಿ ಪ್ರಕ್ರಿಯೆಯಲ್ಲಿ

ಒಳಮೀಸಲಾತಿ ಜಾರಿ ಮಾಡದಿದ್ದರೆ ಎಂದೆಂದೂ ಕಂಡು ಕೇಳರಿಯದ ಉಗ್ರ ಹೋರಾಟಕ್ಕೆ ಸಜ್ಜಾಗಿದೆ. ತಮ್ಮ ರಕ್ತವನ್ನೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪಾರ್ಸಲ್ ಮಾಡಲು ಮುಂದಾಗಿದೆ.

ಪಟ್ಟಣದಲ್ಲಿ ಹೆಚ್ ಡಿ ಕೋಟೆ ಮತ್ತು ಸರಗೂರು ತಾಲೂಕಿನ ಡಾ. ಬಾಬು ಜಗಜೀವನ್ ರಾಮ್ ವಿಚಾರ ವೇದಿಕೆಯ ಸದಸ್ಯರು, ಪದಾಧಿಕಾರಿಗಳು ರಕ್ತ ಕರಪತ್ರ ಚಳುವಳಿ ನಡೆಸಿದರು. ಸಂಪೂರ್ಣ ಒಳಮೀಸಲಾತಿ ಜಾರಿ ಮಾಡುವಂತೆ ತಮ್ಮ ರಕ್ತದಲ್ಲಿ ಪತ್ರ ಬರೆದು ಮುಖ್ಯಮಂತ್ರಿ ಸಿದ್ದರಾಮಯ್ಯ ವರಿಗೆ ಸ್ಪೀಡ್ ಪೋಸ್ಟ್ ಮಾಡಿದರು. ಅಲ್ಲದೆ ಮಾರ್ಚ್ 27 ರಂದು ಸಚಿವ ಸಂಪುಟ ಸಭೆಯಲ್ಲಿ ಒಳಮೀಸಲಾತಿ ಜಾರಿ ಮಾಡುವ ಬಗ್ಗೆ ನಿರ್ಣಯ ಕೈಗೊಳ್ಳದಿದ್ದರೆ, ರಾಜ್ಯದಲ್ಲಿರುವ ಮಾದಿಗ ಸಮುದಾಯದ ಜನ, ತಮ್ಮ ದೇಹದಿಂದ 100 ಎಂಎಲ್ ರಕ್ತ ತೆಗೆದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಸ್ಪೀಡ್ ಪೋಸ್ಟ್ ಮಾಡಬೇಕೆಂದು ಕರೆ ನೀಡಿದರು.

ಡಾ. ಬಾಬು ಜಗಜೀವನ್ ರಾಮ್ ವಿಚಾರ ವೇದಿಕೆ ಸದಸ್ಯ ಕೆ.ಟಿ ಹರೀಶ್ ಮಾತನಾಡಿ, ಕಳೆದ 35 ವರ್ಷಗಳಿಂದಲೂ ಮಾದಿಗಸಮುದಾಯ ಒಳಮೀಸಲಾತಿ ಜಾರಿಗಾಗಿ ಹೋರಾಟ ಮಾಡುತ್ತಲೇ ಬಂದಿದೆ. ಇದಕ್ಕಾಗಿ ಸಮುದಾಯದ ಮುಖಂಡರು ಬೆವರಿನ ಜೊತೆಗೆ ರಕ್ತ ಕೂಡ ಸುರಿಸಿದ್ದಾರೆ. ಇಷ್ಟಾದರೂ ರಾಜ್ಯ ಸರ್ಕಾರ ಸಂಪೂರ್ಣ ಒಳಮೀಸಲಾತಿ ಜಾರಿ ಮಾಡಲು ಮೀನಾಮೇಷ ಎಣಿಸುತ್ತಿದೆ. ಮಾರ್ಚ್ 27 ರಂದು ನಡೆಯುವ ಸಚಿವ ಸಂಪುಟ ಸಭೆಯಲ್ಲಿ ನೇಮಕಾತಿ ಪ್ರಕ್ರಿಯೆಯಲ್ಲೂ ಒಳಮೀಸಲಾತಿ ಜಾರಿ ಮಾಡುವ ಕುರಿತು ನಿರ್ಧಾರ ತೆಗೆದುಕೊಳ್ಳಬೇಕು. ಇಲ್ಲವಾದಲ್ಲಿ ರಾಜ್ಯಾದ್ಯಂತ ಮಾದಿಗ ಸಮುದಾಯ ಉಗ್ರ ಹೋರಾಟ ನಡೆಸಲಿದೆ ಎಂದು ಎಚ್ಚರಿಕೆ ನೀಡಿದರು.

ಡಾ. ಬಾಬು ಜಗಜೀವನ್ ರಾಮ್ ವಿಚಾರ ವೇದಿಕೆ ಸದಸ್ಯ ಪ್ರಕಾಶ್ ಹಿರೇಹಳ್ಳಿ ಮಾತನಾಡಿ, ಕಳೆದ ಮೂರುವರೆ ದಶಕಗಳಿಂದಲೂ ಮಾದಿಗರಿಗೆ ಮೀಸಲಾತಿಯಲ್ಲಿ ಅನ್ಯಾಯವಾಗುತ್ತಿದೆ. ಸುಪ್ರಿಂಕೋರ್ಟ್ ನಿರ್ದೇಶನದಂತೆ ರಾಜ್ಯ ಸರ್ಕಾರ ಮಾದಿಗರಿಗೆ ಶೇ.6ರಷ್ಟು ಒಳ ಮೀಸಲಾತಿ ನೀಡಿದ ಕಡತಕ್ಕೆ ರಾಜ್ಯಪಾಲರು ಅಂಕಿತ ಹಾಕಿದ್ದಾರೆ. ಆದರೆ ರಾಜ್ಯ ಸರ್ಕಾರ ಪರಿಶಿಷ್ಟರಿಗೆ ನೀಡಿದ ಶೇ.17ರಲ್ಲಿ ಕಾನೂನು ತೊಡಕಾಗುತ್ತದೆ ಎಂಬ ನೆಪವೊಡ್ಡಿ ಶೇ.15ಕ್ಕೆ ಇಳಿಸಿ 56 ಸಾವಿರ ಹುದ್ದೆ ಭರ್ತಿ ಮಾಡಲು ಹೊರಟಿರುವುದು ಮಾದಿಗ ಸಮುದಾಯಕ್ಕೆ ಮಾಡಿದ ಅನ್ಯಾಯವಾಗಿದೆ. ಹೀಗಾಗಿ ಸರ್ಕಾರ ಮಾಡುತ್ತಿರುವ ಮೋಸದ ಬಗ್ಗೆ ರಕ್ತ ಕರಪತ್ರ ಚಳುವಳಿ ಮೂಲಕ ಮಾದಿಗ ಸಮುಯದಯಕ್ಕೆ ಜಾಗೃತಿ ಮೂಡಿಸುತ್ತಿದ್ದೇವೆ ಎಂದು ಹೇಳಿದರು.

ಈ ವೇಳೆ ಡಾ. ಬಾಬು ಜಗಜೀವನ್ ರಾಮ್ ವಿಚಾರ ವೇದಿಕೆ ಉಪಾಧ್ಯಕ್ಷ ಸುಭಾಸ್ ಚಂದ್ರ, ಡಾ. ಬಾಬು ಜಗಜೀವನ್ ರಾಮ್ ವಿಚಾರ ವೇದಿಕೆ ಕಾರ್ಯದರ್ಶಿ ನಾಗರಾಜು ಮೊಳೆಯೂರು ಉಪಸ್ಥಿತರಿದ್ದರು.

## ಜಿಲ್ಲಾ ಮಟ್ಟದ ದೌರ್ಜನ್ಯ ನಿಯಂತ್ರಣ 1989 ಪ್ರತಿಬಂಧಕ ಕಾಯ್ದೆಯಡಿ ರಚಿತವಾದ ಜಿಲ್ಲಾ ಮಟ್ಟದ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆ

# ಸ್ಮಶಾನ ಭೂಮಿಗೆ ಅಧಿಕಾರಿಗಳು ಪರಿಹಾರ ಕಂಡುಕೊಳ್ಳಿ :ಡಿಸಿ ಡಾ.ಆನಂದ ಕೆ.

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಸ್ಮಶಾನ ಭೂಮಿ ಸಿಗುವುದೇ ಕಷ್ಟ. ಹಾಗಾಗಿ ಸ್ಮಶಾನ ಭೂಮಿ ಒತ್ತುವರಿ ಸರ್ವೆ ಮಾಡಿ, ಬೇಲಿ ಅಳವಡಿಸಿ, ಹದ್ದುಬಸ್ತ್ ಮಾಡಬೇಕು ಎಂದು ಜಿಲ್ಲಾಧಿಕಾರಿಗಳಾದ ಡಾ.ಆನಂದ ಕೆ. ಅವರು ಹೇಳಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ದೌರ್ಜನ್ಯ ನಿಯಂತ್ರಣ 1989 ಪ್ರತಿಬಂಧ ಕಾಯ್ದೆಯಡಿ ರಚಿತವಾದ ಜಿಲ್ಲಾ ಮಟ್ಟದ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸಭೆಯಲ್ಲಿದ್ದುಕೊಂಡು ಮಾತು ಕೇಳಿಸಿಕೊಂಡು ಹೋಗುವುದಲ್ಲ. ನಿಮ್ಮ ಹಂತದಲ್ಲಿ ಪರಿಹಾರ ಕಲ್ಪಿಸಬೇಕು. ಸ್ಮಶಾನ ಭೂಮಿ ಸಿಗುವುದೇ ಕಷ್ಟ. ಹಾಗಾಗಿ ಅದಕ್ಕೆ ಪರಿಹಾರ ಕೈಗೊಳ್ಳಬೇಕು. ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳು ಗಮನಹರಿಸಬೇಕು ಎಂದು ಸೂಚಿಸಿದರು. ಎಲ್ಲೆಲ್ಲಿ ಸ್ಮಶಾನ ಸಮಸ್ಯೆ ಇದ್ದಲ್ಲಿ ಸಂಬಂಧಿಸಿದವರ ಗಮನಕ್ಕೆ ತರಬೇಕು. ಈ ಸಭೆಯಲ್ಲಿ ಚರ್ಚೆಯಾದ ವಿಷಯ ಹಾಗೂ ಸಮಸ್ಯೆಗಳನ್ನು ತಕ್ಷಣ ಇತ್ಯರ್ಥಪಡಿಸಬೇಕು ಎಂದರು.

ವಸತಿ ನಿಲಯಗಳಲ್ಲಿ ಸ್ವಚ್ಚತೆ ಹಾಗೂ ಜಾಗೃತಿ ಕಾರ್ಯಕ್ರಮ ನಿರಂತರವಾಗಿ ಹಮ್ಮಿಕೊಳ್ಳಬೇಕು ಎಂದರು. ಜಿಲ್ಲೆಯಲ್ಲಿ ಆಯುಷ್ಮಾನ ಭಾರತ ಆರೋಗ್ಯ ಕರ್ನಾಟಕ ಯೋಜನೆಯಡಿ ಚಿಕಿತ್ಸೆ ಪಡೆದುಕೊಳ್ಳಲು ಸಮಸ್ಯೆಗಳನ್ನು ಇತ್ಯರ್ಥಗೊಳಿಸಲು ಆರೋಗ್ಯ ಇಲಾಖೆಯಲ್ಲಿ ಸಂಪರ್ಕ ಸಂವಹನ ಸಾಧಿಸಲು ಹೆಲ್ಪಲೈನ್ ಸ್ಥಾಪಿಸಿ ಜನರ ಸಮಸ್ಯೆಗಳಿಗೆ ತ್ವರಿತ ಸ್ಪಂದನೆ ನೀಡಬೇಕು ಎಂದು ಆರೋಗ್ಯ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಸೂಚಿಸಿದರು.

ಪ.ಜಾತಿ ಹಾಗೂ ಪ.ಪಂ ಜಮೀನಿನಲ್ಲಿ ವಿದ್ಯುತ್ ಕಂಬಗಳ ಎಲ್ ಟಿ ವೈಯರ್ ಹಾಕಿ ವಿದ್ಯುತ್ ಸಂಪರ್ಕ ಕಲ್ಪಿಸಬೇಕು. ರೈತರಿಗೆ ಯಾವುದೇ ಸಮಸ್ಯೆಯಾಗದಂತೆ ಸ್ಥಳ ಪರಿಶೀಲನೆ ಮಾಡಿ ಕ್ರಮ ಕೈಗೊಳ್ಳಬೇಕು ಎಂದರು.

ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಭೂ ಒಡೆತನ ಯೋಜನೆಯಡಿ ಫಾಲೋಅಪ್ ಮಾಡಿ, ಸ್ವಾವಲಂಬಿ ಸಾರಥಿ ಯೋಜನೆಯಡಿ ನಿಯಮಾನುಸಾರ ಫಲಾನುಭವಿಗಳಿಗೆ ಬ್ಯಾಂಕ್ ಸಹಾಯಧನ ಬಿಡುಗಡೆ ಮಾಡಿ ಸರ್ಕಾರಿ ಯೋಜನೆಗಳು ಅರ್ಹರಿಗೆ ತಲುಪಿಸಬೇಕು ಎಂದು ಜಿಲ್ಲಾಧಿಕಾರಿಗಳಾದ ಡಾ. ಆನಂದ ಕೆ. ಅವರು ಅಧಿಕಾರಿಗಳಿಗೆ ಸಲಹೆ ಮಾಡಿದರು. ಸಭೆಯಲ್ಲಿ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ರಿಷಿ ಆನಂದ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಲಕ್ಷ್ಮಣ ನಿಂಬರಗಿ, ವಿಜಯಪುರ ಉಪ ವಿಭಾಗಾಧಿಕಾರಿಗಳಾದ ಗುರುನಾಥ ದಡ್ಡೆ, ಜಿಲ್ಲಾ ಪಂಚಾಯತಿ ಉಪ ಕಾರ್ಯದರ್ಶಿಗಳಾದ ಪ್ರಕಾಶ ವಡ್ಡರ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಮಹೇಶ ಪೋತದಾರ, ಕೃಷಿಇಲಾಖೆಯ ಜಂಟಿ ನಿರ್ದೇಶಕರಾದ ಶಿವನಗೌಡ ಪಾಟೀಲ, ಹೆಸ್ಕಾಂ ಅಧಿಕ್ಷಕ ಅಭಿಯಂತರರಾದ ಸಿದ್ದಪ್ಪ ಬಿಂಜಗೇರಿ, ಆಹಾರ ಇಲಾಖೆಯ ಉಪ ನಿರ್ದೇಶಕ ವಿನಯಕುಮಾರ ಪಾಟೀಲ, ಜಿಲ್ಲಾ ಮಟ್ಟದ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸದಸ್ಯರಾದ ಅಭಿಷೇಕ ಚಕ್ರವರ್ತಿ, ಮದನಕುಮಾರ ನಾಗರದಿನ್ನಿ, ನಾನು ಸೋಮು ಲಮಾಣಿ, ರವಿಕಾಂತ ಬಿರಾದಾರ, ಸಿದ್ದು ರಾಯಣ್ಣರವರ,ಯಮನಪ್ಪ ಸಿದರಡ್ಡಿ, ಮಲ್ಲು ತಳವಾರ, ರಾಜಶೇಖರ ಕೂಚಬಾಳ ಹಾಗೂ ಮಲ್ಲಪ್ಪ ಹಾದಿಮನಿ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR